# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 480 |
| ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 30.01.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪದವಿ ಪೂರ್ವ, ಸ್ನಾತಕ, ಸ್ನಾತಕೋತ್ತರ ಪದವಿ ಸೇರಿದಂತೆ ಮೆಟ್ರಿಕ್ ನಂತರದ ಕೋರ್ಸ್ ಓದುತ್ತಿರುವ ರಾಜ್ಯದ ಹಿಂದುಳಿದ ವರ್ಗಗಳ ಮಕ್ಕಳ ವಿದ್ಯಾರ್ಥಿ ವೇತನ ಪಾವತಿಗೆ ರೂಪಿಸಿರುವ ಯೋಜನೆಗಳು ಯಾವುವು; ಕೇಂದ್ರ ಮತ್ತು ರಾಜ್ಯ ಸರ್ಕಾರದ ಪುರಸ್ಕೃತ ಯೋಜನೆಗಳು ಯಾವುವು; ಅನುದಾನದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಕಾರ್ಯಕ್ರಮಗಳಡಿ ವಿದ್ಯಾರ್ಥಿ ವೇತನ ನೀಡಲಾಗುತ್ತಿರುತ್ತದೆ.<br>1. ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ.<br>2. ಅಲೆಮಾರಿ/ಅರೆ-ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ.<br>3. ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ.<br>4. ಶುಲ್ಕ ಮರು ಪಾವತಿ.<br>ಈ ಕಾರ್ಯಕ್ರಮಗಳ ಪೈಕಿ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು ಅನುದಾನದ ಹಂಚಿಕೆ ಪ್ರಮಾಣ ಕೇಂದ್ರ:ರಾಜ್ಯ::60:40 ಆಗಿರುತ್ತದೆ. ಇನ್ನುಳಿದ ಎಲ್ಲಾ ಕಾರ್ಯಕ್ರಮಗಳು ರಾಜ್ಯ ಪ್ರಾಯೋಜಿತ ಯೋಜನೆಗಳಾಗಿದ್ದು ಸಂಪೂರ್ಣ 100% ಅನುದಾನ ರಾಜ್ಯ ಸರ್ಕಾರದಿಂದ ಬಿಡುಗಡೆಯಾಗುತ್ತಿರುತ್ತದೆ. |
| ಆ) | 2023-24, 2024-25, 2025-26ನೇ ಆರ್ಥಿಕ ವರ್ಷಗಳಲ್ಲಿ ವಿದ್ಯಾರ್ಥಿ ವೇತನ ಸೌಲಭ್ಯಕ್ಕೆ ಎಲ್ಲಾ ಯೋಜನೆಗಳಲ್ಲಿ ಅರ್ಜಿ ಸಲ್ಲಿಸಿದ ಮತ್ತು ಅರ್ಹತೆ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಎಷ್ಟು ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಫ್ ಸಹಾಯಧನ ಪಾವತಿಸಲಾಗಿದೆ: ಎಷ್ಟು ವಿದ್ಯಾರ್ಥಿಗಳಿಗೆ ಪಾವತಿಗೆ ಬಾಕಿಯಿದೆ; ಬಾಕಿ ಇರಲು ಕಾರಣಗಳೇನು; ಆರ್ಥಿಕ ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು; | 2023-24, 2024-25, 2025-26 ನೇ ಸಾಲುಗಳಲ್ಲಿ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಅರ್ಹತೆ ಪಡೆದ ವಿದ್ಯಾರ್ಥಿಗಳು ಮತ್ತು ಬಾಕಿ ಇರುವ ವಿದ್ಯಾರ್ಥಿಗಳ ವಿವರಗಳನ್ನು **ಅನುಬಂಧ-1 ರಲ್ಲಿ** ಒದಗಿಸಿದೆ.<br>2023-24, 2024-25, 2025-26 ನೇ ಸಾಲುಗಳಲ್ಲಿ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳಡಿ ಪಾವತಿ ಮಾಡಲಾಗಿರುವ ವಿದ್ಯಾರ್ಥಿಗಳ ವಿವರಗಳನ್ನು **ಅನುಬಂಧ-2 ರಲ್ಲಿ** ಒದಗಿಸಿದೆ.<br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ವೇತನ ಕಾರ್ಯ ಕ್ರಮಗಳನ್ನು ಇ- ಆಡಳಿತ ಇಲಾಖೆಯು |

...2

| | | |
|---|---|---|
| | | ಅಭಿವೃದ್ಧಿ ಪಡಿಸಿ ನಿರ್ವಹಣೆ ಮಾಡುತ್ತಿರುವ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಕಾರ್ಯಕ್ರಮಗಳಡಿ ವಿದ್ಯಾರ್ಥಿಗಳ ಆದಾರ್ ಸಂಖ್ಯೆಗೆ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ನೇರವಾಗಿ ಜಮ ಮಾಡಲಾಗುತ್ತಿದೆ.<br><br>ಆದರೆ ವಿದ್ಯಾರ್ಥಿಗಳ ಶೈಕ್ಷಣಿಕ ದತ್ತಾಂಶದಲ್ಲಿರುವ ಹೆಸರಿಗೂ ಹಾಗೂ ಆದಾರ್ ನಲ್ಲಿರುವ ಹೆಸರಿಗೂ ವ್ಯತ್ಯಾಸವಿರುತ್ತದೆ, ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆದಾರ್ ಸಂಖ್ಯೆಯನ್ನು ಲಿಂಕ್ ಮಾಡಿರುವುದಿಲ್ಲ, ವಿಶ್ವವಿದ್ಯಾಲಯಗಳಿಂದ ಶೈಕ್ಷಣಿಕ ದತ್ತಾಂಶ ಹಂಚಿಕೊಂಡಿರುವುದಿಲ್ಲ ಮತ್ತು ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ 2023-24 ಮತ್ತು 2024-25 ನೇ ಸಾಲುಗಳಿಗೆ ಆರ್ಥಿಕ ವರ್ಷ ಮುಕ್ತಾಯವಾದ ನಂತರವೂ ಅರ್ಜಿ ಸ್ವೀಕರಿಸಲಾಗಿರುತ್ತದೆ. ಈ ಎಲ್ಲಾ ಕಾರಣಗಳಿಂದ ವಿದ್ಯಾರ್ಥಿ ವೇತನ ಪಾವತಿ ಮಾಡಲು ಬಾಕಿ ಇರುತ್ತದೆ. |
| ಇ) | ಹಿಂದಿನ ಆರ್ಥಿಕ ವರ್ಷದಲ್ಲಿ ಜಾರಿಯಲ್ಲಿದ್ದ ಸ್ಕಾಲರ್‌ಶಿಪ್ ಯೋಜನೆಗಳನ್ನು ನಿಲ್ಲಿಸಲಾಗಿದೆಯೇ? ಸ್ಕಾಲರ್‌ಶಿಪ್ ಯೋಜನೆಗಳಲ್ಲಿ ಅರ್ಹತೆ ಹೊಂದಲು ಸರ್ಕಾರ ನಿಗದಿಪಡಿಸಿದ ಮಾನದಂಡಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಹಿಂದಿನ ಆರ್ಥಿಕ ವರ್ಷದಡಿ ಯಾವುದೇ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳನ್ನು ನಿಲ್ಲಿಸಿರುವುದಿಲ್ಲ. ಅರ್ಹತಾ ಮಾನದಂಡ ಆದೇಶಗಳನ್ನು **ಅನುಬಂಧ-3ರಲ್ಲಿ** ಒದಗಿಸಿದೆ. |

**ಸಂಖ್ಯೆ:ಹಿಂವಕ 119 ಬಿಎಂಎಸ್ 2026**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.

**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರ ಕ್ಷೇತ್ರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 480 ಕ್ಕೆ ಅನುಬಂಧ-1**

| ಆರ್ಥಿಕ ವರ್ಷ | ಸ್ವೀಕೃತವಾದ ಅರ್ಜಿಗಳು | ಅರ್ಹ ಅರ್ಜಿಗಳು | ಅನರ್ಹ ಅರ್ಜಿಗಳು | ಪಾವತಿ ಮಾಡಿರುವ ವಿದ್ಯಾರ್ಥಿಗಳು | ಬಾಕಿ ಇರುವ ಅರ್ಜಿಗಳು |
|---|---|---|---|---|---|
| **2023-24** | 804148 | 740010 | 64138 | 677289 | 62721 |
| **2024-25** | 813286 | 651767 | 161519 | 577493 | 74274 |
| **2025-26** | 592000 | 483591 | 108049 | 345151 | 138440 |

ಟಿಪ್ಪಣಿ: ಕಳೆದ ಸಾಲುಗಳಲ್ಲಿ ಬಾಕಿ ಇರುವ ಅರ್ಜಿಗಳಿಗೆ ಪಾವತಿ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ದಿನಾಂಕ:29.01.2026ರಂದು Payment Response ಬಂದಿರುವ ಅರ್ಜಿಗಳನ್ನು ಮಾತ್ರ ಪಾವತಿ ಮಾಡಿರುವ ಅರ್ಜಿಗಳು ಎಂದು ಪರಿಗಣಿಸಲಾಗಿರುತ್ತದೆ.

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು

ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರ ಕ್ಷೇತ್ರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 480 ಕ್ಕೆ
ಅನುಬಂಧ-2

(ರೂ.ಕೋಟಿಗಳಲ್ಲಿ)

| ಯೋಜನೆಯ ಹೆಸರು | 2023-24 | | 2024-25 | | 2025-26 | |
|---|---|---|---|---|---|---|
| | ಪಾವತಿಯಾದ ಅರ್ಜಿಗಳ ಸಂಖ್ಯೆ | ಪಾವತಿಯಾದ ಮೊತ್ತ | ಪಾವತಿಯಾದ ಅರ್ಜಿಗಳ ಸಂಖ್ಯೆ | ಪಾವತಿಯಾದ ಮೊತ್ತ | ಪಾವತಿಯಾದ ಅರ್ಜಿಗಳ ಸಂಖ್ಯೆ | ಪಾವತಿಯಾದ ಮೊತ್ತ |
| ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ | 293770 | 256.55 | 141939 | 122.86 | 191879 | 130.83 |
| ಅಲೆಮಾರಿ/ಅರೆ ಅಲೆಮಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ | 14120 | 12.19 | 16306 | 14.29 | 0 | 0 |
| ಶುಲ್ಕ ಮರುಪಾವತಿ | 492161 | 392.73 | 595180 | 469.46 | 153272 | 186.54 |
| ವಿದ್ಯಾಸಿರಿ | 39332 | 58.99 | 32984 | 49.48 | 41111 | 61.66 |

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದ ಮಾರ್ಗಸೂಚಿಗಳನ್ನು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ PM-YASASVI ಯೋಜನೆಯ ಮಾರ್ಗಸೂಚಿಗಳಂತೆ ಪರಿಷ್ಕರಿಸುವ ಕುರಿತು.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 518 ಬಿಎಂಎಸ್ 2013 ಬೆಂಗಳೂರು ದಿನಾಂಕ:03.09.2013.
2. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ PM-YASASVI ಮಾರ್ಗಸೂಚಿಗಳು (2021-2022 ರಿಂದ 2025-26).
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ: BCWD-17015/10/2023-BCWD_SCHLR-BCWD ದಿನಾಂಕ:11.09.2023.

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಆದೇಶದಲ್ಲಿ ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನವನ್ನು ಮಂಜೂರು ಮಾಡುವ ಕುರಿತಂತೆ ಆದೇಶಿಸಲಾಗಿರುತ್ತದೆ. ಅದರಂತೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿರುತ್ತದೆ.

ಮೇಲೆ ಓದಲಾದ (2)ರಲ್ಲಿ ಪ್ರಸ್ತುತ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯು PM-YASASVI ಯೋಜನೆಯ (2021-2022 ರಿಂದ 2025-2026) ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ನೀಡಲಾಗಿರುವ ಮಾರ್ಗಸೂಚಿಗಳನ್ನು ಬದಲಾಯಿಸಿ ಆದೇಶ ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ (3)ರ ಆಯುಕ್ತರ ಪ್ರಸ್ತಾವನೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ518 ಬಿಎಂಎಸ್ 2013, ಬೆಂಗಳೂರು ದಿನಾಂಕ:03.09.2013ರ ಆದೇಶದಲ್ಲಿ ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನವನ್ನು ಮಂಜೂರು ಮಾಡುವ ಕುರಿತಂತೆ ಆದೇಶಿಸಲಾಗಿರುತ್ತದೆ ಅದರಂತೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿರುತ್ತದೆ.

ಪ್ರಸ್ತುತ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ PM-YASASVI ಮಾರ್ಗಸೂಚಿಗಳಲ್ಲಿ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯು PM-YASASVI ಯೋಜನೆಯಡಿ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ನೀಡಲಾಗಿರುವ ಮಾರ್ಗಸೂಚಿಗಳನ್ನು ಬದಲಾಯಿಸಿ ಆದೇಶ ಹೊರಡಿಸಲಾಗಿರುತ್ತದೆ. ಅದರಂತೆ ಕೇಂದ್ರ ಪುರಸ್ಕೃತ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದ ಮಾರ್ಗಸೂಚಿಗಳನ್ನು ಬದಲಾವಣೆ ಮಾಡುವುದು ಅವಶ್ಯಕತೆಯಿದ್ದು, PM-YASASVI ಯೋಜನೆಯ ಮಾರ್ಗಸೂಚಿಗಳಂತೆ ಪರಿಷ್ಕರಿಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 445 ಬಿಎಂಎಸ್ 2023, ಬೆಂಗಳೂರು, ದಿನಾಂಕ:08.11.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದ ಈ ಹಿಂದಿನ

08/11/23

....2

Scanned with CamScanner

ಸರ್ಕಾರದ ಆದೇಶಗಳನ್ನು ನಿರಸನಗೊಳಿಸಿ, ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯು ಹೊರಡಿಸಿರುವ PM-YASASVI ಯೋಜನೆಯ ಮಾರ್ಗಸೂಚಿಗಳಂತೆ ಪರಿಷ್ಕರಿಸಿ, ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧ-1 ರಲ್ಲಿರುವ ಮಾರ್ಗಸೂಚಿಗಳಂತೆ ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನದ ಕಾರ್ಯಕ್ರಮವನ್ನು ಜಾರಿಗೊಳಿಸಲು ಆದೇಶಿಸಿದೆ. ಗುಂಪುವಾರು ಕೋರ್ಸ್‌ಗಳ ವಿವರಗಳನ್ನು ಅನುಬಂಧ-2ರಲ್ಲಿ ಒದಗಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ/792/ವೆಚ್ಚ-3/ 2023, ದಿನಾಂಕ:20.10.2023ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಇಲಾಖಾ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

V. Akkamahadevi 08/11/23

(ವಿ. ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-3) ವಿಧಾನಸೌಧ, ಬೆಂಗಳೂರು.
7. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
8. ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.
9. ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು.
10. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಬೆಂಗಳೂರು.
11. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner

ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 445 ಬಿಎಂಎಸ್ 2023, ದಿನಾಂಕ:08.11.2023ಕ್ಕೆ

## ಅನುಬಂಧ-1

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್-ನಂತರ ವಿದ್ಯಾರ್ಥಿವೇತನದ ಪರಿಷ್ಕೃತ ಮಾರ್ಗಸೂಚಿಗಳು

**1. ಯೋಜನೆಯ ಉದ್ದೇಶ**

**1.1** ಯಾವುದೇ ಇಲಾಖೆಯ, ವಿದ್ಯಾರ್ಥಿನಿಲಯದಲ್ಲಿ/ ವಸತಿ ಕಾಲೇಜುಗಳಲ್ಲಿ, ಪ್ರವೇಶ ದೊರೆಯದ ಹಾಗೂ ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಆಯ್ಕೆಯಾಗದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ಹಿಂದುಳಿದ ವರ್ಗಗಳ ಡೇ ಸ್ಕಾಲರ್ ವಿದ್ಯಾರ್ಥಿಗಳಿಗೆ, "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ" ಸೌಲಭ್ಯವನ್ನು ನೀಡುವುದು ಈ ಯೋಜನೆಯ ಉದ್ದೇಶ.

**2. ಅರ್ಹತೆ**

**2.1** ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.

**2.2** ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿರುವ, ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.

**2.3** ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ/ಸ್ಥಳೀಯ ಸಂಸ್ಥೆ/ಅನುದಾನಿತ ಸಂಸ್ಥೆಗಳು/ಮಾನ್ಯತೆ ಪಡೆದ ಅನುದಾನ ರಹಿತ ಖಾಸತಿ ಸಂಸ್ಥೆಗಳಲ್ಲಿ- ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಾಗಿರಬೇಕು.

2.4 ಈ ಸೌಲಭ್ಯ ಪಡೆಯಲು ವಿದ್ಯಾರ್ಥಿಯ, ತಂದೆ-ತಾಯಿ/ಪೋಷಕರ ಕುಟುಂಬದ, ಒಟ್ಟು ವಾರ್ಷಿಕ ವರಮಾನ ಪ್ರವರ್ಗ-1 ವಿದ್ಯಾರ್ಥಿಗಳಿಗೆ ರೂ.2.50 ಲಕ್ಷಗಳ ಮಿತಿಯೊಳಗೆ ಇರಬೇಕು. ಉಳಿದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ತಂದ-ತಾಯಿ /ಪೋಷಕರ ಕುಟುಂಬದ ಒಟ್ಟ ವಾರ್ಷಿಕ ವರಮಾನ ರೂ.1.00 ಲಕ್ಷಗಳ ಮಿತಿಯೊಳಗೆ ಇರಬೇಕು.

**2.5** ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ. (ಉದಾ: ಬಿ.ಎ ನಂತರ ಬಿ.ಕಾಂ, ಎಂಎ (ಕನ್ನಡ) ನಂತರ ಎಂ.ಎ (ಇಂಗ್ಲೀಷ್), ಬಿ.ಎಡ್ ನಂತರ ಎಲ್.ಎಲ್.ಬಿ, ಇತ್ಯಾದಿಗಳಿಗೆ ಪ್ರವೇಶ ಪಡೆದಿದ್ದಲ್ಲಿ)

**2.6** ಮ್ಯಾನೇಜ್ಮೆಂಟ್ ಕೋಟಾದ ವಿದ್ಯಾರ್ಥಿಗಳು ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ.

**2.7** ಈ ಯೋಜನೆ ಅಡಿಯಲ್ಲಿ ವಿದ್ಯಾರ್ಥಿವೇತನ ಪಡೆಯುತ್ತಿರುವವನು ಇತರ ಯಾವುದೇ ವಿದ್ಯಾರ್ಥಿವೇತನವನ್ನು/ಸ್ಟೈಪೆಂಡ್‌ನ್ನು ಪಡೆಯುವ ಹಾಗಿಲ್ಲ. ಇತರ ಯಾವುದೇ ವಿದ್ಯಾರ್ಥಿವೇತನ/ ಸ್ಟೈಪೆಂಡನ್ನು ನೀಡಿದ್ದರೆ, ವಿದ್ಯಾರ್ಥಿಗಳು ವಿದ್ಯಾರ್ಥಿವೇತನ/ಸ್ಟೈಪಂಡ್ ಇವೆರಡರಲ್ಲಿ, ಆತನಿಗೆ/ಆಕೆಗೆ ಯಾವುದೂ ಹೆಚ್ಚು ಪ್ರಯೋಜನಕಾರಿಯೋ ಅವುಗಳಲ್ಲಿ ಒಂದಕ್ಕೆ ಆತನ/ಆಕೆಯ ಆಯ್ಕೆಯನ್ನು ಚಲಾಯಿಸಬಹುದು ಮತ್ತು ಮಾಡಲಾದ ಆಯ್ಕೆಯ ಬಗ್ಗೆ ಸಂಸ್ಥೆಯ ಮುಖ್ಯಸ್ಥನ ಮೂಲಕ ನೀಡಿಕೆ ಪ್ರಾಧಿಕಾರಕ್ಕೆ ತಿಳಿಸಬೇಕು.

**2.8** ಕಲೆ, ವಿಜ್ಞಾನ, ಹಾಗೂ ವಾಣಿಜ್ಯ ಕೋರ್ಸುಗಳ, ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ/ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೋಮ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ, ಹಾಗೂ ಇತರೆ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯ ಅಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

08/11/23

...2

Scanned with CamScanner

**2.9** ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು, ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟೀಸ್ ಮಾಡುತ್ತಿದ್ದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

**2.10** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಅಥವಾ ಕೇಂದ್ರ ಪುರಸ್ಕೃತ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳಡಿಯಲ್ಲಿ ಯಾವುದಾದರೂ ಒಂದು ಯೋಜನೆಯಡಿ ಮಾತ್ರ ಫಲಾನುಭವಿಯಾಗಲು ಅರ್ಹರಿರುತ್ತಾರೆ.

**2.11** ಈ ಯೋಜನೆಯಡಿ ಪ್ರಥಮ ಬಾರಿಗೆ ಸೌಲಭ್ಯವನ್ನು ಪಡೆಯಲು, ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ, ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

ಪ್ರವರ್ಗ-1:-50%
ಪ್ರವರ್ಗ-2ಎ, 3ಎ, 3ಬಿ:-60%.

ನವೀಕರಣ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಬೇಕಾಗಿದ್ದಲ್ಲಿ, ಅವರು ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಈ ಕೆಳಗಿನಂತೆ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

ಪ್ರವರ್ಗ-1:-60%
ಪ್ರವರ್ಗ-2ಎ, 3ಎ, 3ಬಿ:-65%

**2.12** AISHE/UDISE ಕೋಡ್ ಹೊಂದಿರುವ ಶೈಕ್ಷಣಿಕ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮಾತ್ರ ಈ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.

**2.13** ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

**3. ಅರ್ಜಿ ಸಲ್ಲಿಸುವ ವಿಧಾನ**

**3.1** ಎಲ್ಲಾ ಅರ್ಜಿಗಳನ್ನು ಅಗತ್ಯ ಪ್ರಮಾಣಪತ್ರಗಳೊಂದಿಗೆ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ನಿಗದಿತ ಅಂತಿಮ ದಿನಾಂಕದೊಳಗೆ ಸಲ್ಲಿಸತಕ್ಕದ್ದು.

**3.2** ಭೌತಿಕ ರೂಪದ ಅರ್ಜಿ ಸಲ್ಲಿಸುವುದಕ್ಕೆ ಅವಕಾಶವಿರುವುದಿಲ್ಲ. ಭೌತಿಕ ಪರಿಶೀಲನೆಯನ್ನು ತಗ್ಗಿಸುವ ದೃಷ್ಟಿಯಿಂದ, ಎಲ್ಲಾ ಆನ್‌ಲೈನ್ ಅರ್ಜಿಗಳನ್ನು ಜಾತಿ ಮತ್ತು ಆದಾಯ ಪ್ರಮಾಣಪತ್ರಗಳ ದತ್ತಾಂಶ ಕಣಜಗಳೊಂದಿಗೆ ಸಂಪರ್ಕ ಕಲ್ಪಿಸುವ ಮೂಲಕ ಸ್ವಯಂ-ಪರಿಶೀಲನೆಗೊಳಪಡಿಸತಕ್ಕದ್ದು.

**3.3** ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅಗತ್ಯವಿರುವ ಪ್ರಮಾಣಪತ್ರಗಳ ವಿವರಗಳನ್ನು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ವಿದ್ಯಾರ್ಥಿಗಳು ಪರಿಶೀಲಿಸುವುದು.

**4. ಅನುದಾನ ಹಂಚಿಕೆ ವಿಧಾನ**

**4.1** ಆಯಾ ಆರ್ಥಿಕ ವರ್ಷಕ್ಕೆ ಲಭ್ಯವಾಗುವ ಅನುದಾನದಲ್ಲಿ ನವೀಕರಣ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡುವುದು.

08/11/23

...3

Scanned with CamScanner

**4.2** ನವೀಕರಣ ವಿದ್ಯಾರ್ಥಿಗಳಿಗೆ ಮಂಜೂರು ಮಾಡಿ ಲಭ್ಯವಾಗುವ ಅನುದಾನವನ್ನು ಪ್ರವರ್ಗವಾರು ಈ ಕೆಳಗಿನಂತೆ ಶೇಕಡವಾರು ಹಂಚಿಕೆ ಮಾಡಬೇಕು.

ಪ್ರವರ್ಗ-1 ರ ಎಲ್ಲಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಪಾವತಿಸಲು ಕ್ರಮ ವಹಿಸುವುದು. ಮುಂದುವರೆದು ಉಳಿಕೆ ಅನುದಾನವನ್ನು ಈ ಕೆಳಕಂಡಂತೆ ಹಂಚಿಕೆ ಮಾಡಲಾಗುವುದು.

ಪ್ರವರ್ಗ-2ಎ - 63%

ಪ್ರವರ್ಗ-3ಎ – 16%

ಪ್ರವರ್ಗ-3ಬಿ – 20%

ಇತರೆ OBC –01%

ಒಟ್ಟು – 100%

**4.3** ಆ ಆರ್ಥಿಕ ವರ್ಷಕ್ಕೆ ಲಭ್ಯವಾಗುವ ಅನುದಾನದ ಮಿತಿಗೆ ಒಳಪಟ್ಟು ಅರ್ಹತೆ ಮತ್ತು ಆದಾಯಕ್ಕೆ ಅನುಗುಣವಾಗಿ ಮಂಜೂರು ಮಾಡಬೇಕು.

**4.4** ಮೇಲೆ ನಿಗದಿಪಡಿಸಿರುವ ಪ್ರವರ್ಗವಾರು ಮೀಸಲಾತಿ ಅನ್ವಯ ಈ ಕೆಳಕಂಡ ಆದ್ಯತೆಯ ಮೇರೆಗೆ ವಿದ್ಯಾರ್ಥಿವೇತನ ಮಂಜೂರು ಮಾಡುವುದು.

ಅ) ಸರ್ಕಾರಿ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರಥಮ ಆದ್ಯತೆ ಮೇರೆಗೆ ವಿದ್ಯಾರ್ಥಿವೇತನ ಮಂಜೂರು ಮಾಡುವುದು.

ಆ) ಸರ್ಕಾರಿ ಅನುದಾನಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ದ್ವಿತೀಯ ಆದ್ಯತೆ ಮೇರೆಗೆ ವಿದ್ಯಾರ್ಥಿವೇತನ ಮಂಜೂರು ಮಾಡುವುದು.

ಇ) ಉಳಿಕೆ ಅನುದಾನವನ್ನು ಅನುದಾನ ರಹಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮೆರಿಟ್ ಆಧಾರದಲ್ಲಿ ವಿದ್ಯಾರ್ಥಿವೇತನ ಮಂಜೂರು ಮಾಡುವುದು.

**4.4** ಕೇಂದ್ರ ಮತ್ತು ರಾಜ್ಯಗಳ ನಡುವೆ 60:40 ಅನುಪಾತದ ಪ್ರಮಾಣದಲ್ಲಿ ನಿಧಿ ಹಂಚಿಕೆಯಾಗುತ್ತದೆ.

**4.5** ಈ ಯೋಜನೆಗೆ ಅಗತ್ಯವಿರುವ ಅನುದಾನವನ್ನು ಕೇಂದ್ರ ಪುರಸ್ಕೃತ ಯೋಜನೆ-ಕೇಂದ್ರದ ಪಾಲು- ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ರಾಜ್ಯ ವಲಯ ಲೆಕ್ಕ ಶೀರ್ಷಿಕೆ- 2225-03-277-2-72 (117) ಮತ್ತು ಕೇಂದ್ರ ಪುರಸ್ಕೃತ ಯೋಜನೆ- ರಾಜ್ಯದ ಪಾಲು- ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ರಾಜ್ಯ ವಲಯ ಲೆಕ್ಕ ಶೀರ್ಷಿಕೆ- 2225-03-277-2-51 (117) ರಲ್ಲಿ ಬಿಡುಗಡೆಯಾಗುವ ಅನುದಾನದಲ್ಲಿ ಭರಿಸತಕ್ಕದ್ದು.

08/11/23

....4

Scanned with CamScanner

5.ವಿದ್ಯಾರ್ಥಿವೇತನ ದರಗಳು

| ಕೋರ್ಸುಗಳ ಪ್ರವರ್ಗ | ವಾರ್ಷಿಕವಾಗಿ (ರೂಪಾಯಿಗಳು) | | |
|---|---|---|---|
| | ಶೈಕ್ಷಣಿಕ ಭತ್ಯೆ | ಬೋಧನಾ ಶುಲ್ಕ | ಒಟ್ಟು |
| **ಗ್ರೂಪ್ - 1:** ಪದವಿ ಮತ್ತು ಸ್ನಾತಕೋತ್ತರ ಪದವಿ ಮಟ್ಟದ ವೃತ್ತಿಪರ ಕೋರ್ಸುಗಳು. | 10000 | 10000 | 20000 |
| **ಗ್ರೂಪ್ - 2:** ಪದವಿ, ಡಿಪ್ಲೋಮಾ, ಪ್ರಮಾಣಪತ್ರಕ್ಕೆ ಕಾರಣವಾಗುವ ಇತರ ವೃತ್ತಿಪರ ಕೋರ್ಸುಗಳು | 8000 | 5000 | 13000 |
| **ಗ್ರೂಪ್ - 3:** ಗ್ರೂಪ್ I ಮತ್ತು ಗ್ರೂಪ್ II ರಲ್ಲಿ ಒಳಗೊಳ್ಳದ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸುಗಳು. | 6000 | 2000 | 8000 |
| **ಗ್ರೂಪ್ - 4:** ಎಲ್ಲಾ ಮೆಟ್ರಿಕ್ಯೂಲೇಷನ್ ನಂತರದ (Xನೇ ತರಗತಿಯ ನಂತರದ ಮಟ್ಟ) ಪದವಿಯೇತರರ ಕೋರ್ಸುಗಳು. | 5000 | 0 | 5000 |

ಕೋರ್ಸುಗಳ ವಿವರಗಳನ್ನು ಅನುಬಂಧ-2 ರಲ್ಲಿ ನೀಡಲಾಗಿದೆ.

**6. ಮಂಜೂರಾತಿ ವಿಧಾನ**

**6.1** ವಿದ್ಯಾರ್ಥಿಯು ಆನ್ ಲೈನ್ ಮುಖಾಂತರ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಿದ ನಂತರ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ತಮ್ಮ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ವಿದ್ಯಾರ್ಥಿಗಳು ಸಲ್ಲಿಸಿರುವ ದಾಖಲಾತಿಗಳ ವಿವರಗಳನ್ನು ಪರಿಶೀಲಿಸುವುದು.

**6.2** ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾದಿಕಾರಿಗಳು ಪರಿಶೀಲಿಸಿದ ಅರ್ಜಿಗಳನ್ನು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಮತ್ತೊಮ್ಮೆ ಪರಿಶೀಲಿಸಿ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಮೂಲಕ ಮಂಜೂರು ಮಾಡಲು ಕ್ರಮವಹಿಸುವುದು.

**6.3** ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಂದ ಮಂಜೂರಾತಿ ಪಡೆದ ವಿದ್ಯಾರ್ಥಿಗಳ ಆಧಾರ್ ಸೀಡ್ ಆಗಿರುವ ಬ್ಯಾಂಕ್ ಖಾತೆಗೆ ನೇರವಾಗಿ ಆಯುಕ್ತಾಲಯದಿಂದ ಹಣ ವರ್ಗಾವಣೆ ಮಾಡಲು ಕ್ರಮಕೈಗೊಳ್ಳುವುದು. ಸಹಾಯಕ ನಿರ್ದೇಶಕರು/ ಅದಕ್ಕಿಂತಲೂ ಹೆಚ್ಚಿನ ದರ್ಜೆಯ ಅಧಿಕಾರಿ ಈ ಪ್ರಕ್ರಿಯೆಯ ಮೇಲ್ವಿಚಾರಣೆ ಮಾಡುವುದು.

**6.4** ವಿದ್ಯಾರ್ಥಿವೇತನ ಪಾವತಿ ಸಂದರ್ಭದಲ್ಲಿ ಭಾರತ ಸರ್ಕಾರದ ವೆಚ್ಚ ಇಲಾಖೆ (MOF) ಯ ಅಧಿಕೃತ ಜ್ಞಾಪನ ಸಂ.1 (13)/ಪಿಎಫ್‌ಎಂಎಸ್/ಎಫ್ ಸಿಡಿ/2020, ದಿನಾಂಕ:23.3.2021 ಕ್ಕೆ ಬದ್ಧವಾಗಿರತಕ್ಕದ್ದು.

08/11/23

....5

Scanned with CamScanner

7. ಆಡಳಿತಾತ್ಮಕ ವೆಚ್ಚಗಳು

7.1 ಆಡಳಿತ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನಕ್ಕಾಗಿನ ಆಡಳಿತಾತ್ಮಕ ವೆಚ್ಚವು ವಾರ್ಷಿಕ ಯೋಜನಾ ವೆಚ್ಚದ ಶೇಕಡಾ 1% ಕ್ಕೆ ಮಿತಿಗೊಳಿಸತಕ್ಕದ್ದು. ಈ ವೆಚ್ಚವನ್ನು ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಪೋರ್ಟಲ್ ಅಭಿವೃದ್ಧಿ, ಸಾಮಾಜಿಕ ಲೆಕ್ಕ ಪರಿಶೋಧನೆಗಳನ್ನು ನಡೆಸುವಿಕೆ, ಪ್ರಚಾರ ಮತ್ತು ಜಾಗೃತಿ ಕಾರ್ಯಕ್ರಮ ಅಥವಾ ಯಾವುದೇ ಇತರ ಚಟುವಟಿಕೆಗಾಗಿ ಬಳಸಿಕೊಳ್ಳಬಹುದು.

8. ಇತರ

8.1 ವಿದ್ಯಾರ್ಥಿಯು ಕಾಲೇಜು/ಶೈಕ್ಷಣಿಕ ಸಂಸ್ಥೆಗಳ ಶಿಸ್ತನ್ನು ಅಥವಾ ವಿದ್ಯಾರ್ಥಿ ವೇತನದ ಇತರ ಯಾವುದೇ ನಿಬಂಧನೆಗಳು ಮತ್ತು ಷರತ್ತುಗಳನ್ನು ಉಲ್ಲಂಘಿಸಿದರೆ, ಸಕ್ಷಮ ಶೈಕ್ಷಣಿಕ ಪ್ರಾಧಿಕಾರಕ್ಕೆ ಮನದಟ್ಟಾಗುವುದಕ್ಕೆ ಒಳಪಟ್ಟು, ಅಂಥ ವಿದ್ಯಾರ್ಥಿಯ ವಿದ್ಯಾರ್ಥಿವೇತನವನ್ನು ಅಮಾನತಿನಲ್ಲಿಡಬಹುದು ಅಥವಾ ರದ್ದುಗೊಳಿಸಬಹುದು.

8.2 ವಿಶೇಷ ಸನ್ನಿವೇಶಗಳಲ್ಲಿ ಹೊರತುಪಡಿಸಿ ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಜೀವನದ ಹಿತದೃಷ್ಟಿಯಿಂದ, ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ವರ್ಷದ ಕೋರ್ಸಿನ ಅವಧಿಯಲ್ಲಿ ಒಂದು ಸಂಸ್ಥೆಯಿಂದ ಮತ್ತೊಂದು ಸಂಸ್ಥೆಗೆ ವಲಸೆ ಹೋಗುವುದಕ್ಕೆ ಅವಕಾಶವಿರುವುದಿಲ್ಲ.

8.3 ಈ ಯೋಜನೆಯ ಅಡಿಯಲ್ಲಿ ಪ್ರಯೋಜನಗಳನ್ನು ಪಡೆಯುವ ವಿದ್ಯಾರ್ಥಿಯು ಇತರ ಯಾವುದೇ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಯೋಜನೆಯ ಅಡಿಯಲ್ಲಿ ಪ್ರಯೋಜನಗಳನ್ನು ಪಡೆಯಲು ಅವಕಾಶವಿರತಕ್ಕದ್ದಲ್ಲ.

8.4 ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

8.5 ವಿದ್ಯಾರ್ಥಿವೇತನ ಪಡೆಯುವುದಕ್ಕಾಗಿ ಹಿಂದಿನ ವರ್ಷದಲ್ಲಿ ಶೇಕಡಾ 75%ಕ್ಕಿಂತ ಕಡಿಮೆಯಿರದಂತೆ ನಿಯಮಿತ ಹಾಜರಾತಿ ದಾಖಲೆಯು ಅಗತ್ಯವಾಗಿರುತ್ತದೆ.

8.6 ವಿದ್ಯಾರ್ಥಿವೇತನಗಳ ಮಂಜೂರಾತಿಗಾಗಿ ಕನಿಷ್ಠ ಶೇಕಡಾ 5% ರಷ್ಟು ವಿಶೇಷಚೇತನ ವಿದ್ಯಾರ್ಥಿಗಳನ್ನು ಒಳಗೊಂಡಿರಬೇಕು. ಶೇಕಡಾ 30% ರಷ್ಟು ಫಲಾನುಭವಿಗಳು ವಿದ್ಯಾರ್ಥಿನಿಯರಾಗಿರಬೇಕು.

8.7 ವಿದ್ಯಾರ್ಥಿಯು ತಪ್ಪು ವಿವರಗಳನ್ನು ನೀಡಿ ವಿದ್ಯಾರ್ಥಿವೇತನವನ್ನು ಪಡೆದಿರುವುದು ಕಂಡುಬಂದಲ್ಲಿ, ಅವನ/ಅವಳ ವಿದ್ಯಾರ್ಥಿವೇತನವನ್ನು ಆ ಕೂಡಲೇ ರದ್ದುಗೊಳಿಸಲಾಗುವುದು ಮತ್ತು ಸಂದಾಯ ಮಾಡಲಾಗಿರುವ ವಿದ್ಯಾರ್ಥಿ ವೇತನದ ಮೊತ್ತವನ್ನು ವಸೂಲು ಮಾಡಲಾಗುವುದು. ಸಂಬಂಧಪಟ್ಟ ವಿದ್ಯಾರ್ಥಿಯನ್ನು ಕಪ್ಪುಪಟ್ಟಿಗೆ ಸೇರಿಸಿ, ಮುಂದಿನ ಇತರ ಯಾವುದೇ ಯೋಜನೆಯಲ್ಲಿ ವಿದ್ಯಾರ್ಥಿವೇತನವನ್ನು ಪಡೆಯದಂತೆ ನಿಷೇಧಿಸಲಾಗುವುದು.

8.8 ಈ ಯೋಜನೆಯ ಉಪಬಂಧಗಳು ರಾಜ್ಯ ಸರ್ಕಾರದ ವಿವೇಚನೆಗೆ ಅನುಸಾರವಾಗಿ ಯಾವುದೇ ಸಮಯದಲ್ಲಿ ಬದಲಾವಣೆ ಮಾಡಬಹುದು.

V. Akkamahadevi
08/11/23

(ವಿ. ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

Scanned with CamScanner

ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 445 ಬಿಎಂಎಸ್ 2023, ದಿನಾಂಕ:08.11.2023ಕ್ಕೆ

## ಅನುಬಂಧ-2

### Group-A

i) Degree and Post Graduate level courses including M.Phil., P.hD., and Post Doctoral research in Medicine (Alltopathic, Indian and other recognized systems of medicines), Engineering, Technology, Planning, Architecture Design, Fashion Technology, Agriculture, Veterinary & Allied Sciences, Management, Business Finance / Adminisiration, Computer Science/Applications.

ii) Post Graduate Diploma courses in various branche of Managemet & medicine.

iii) CA/I.C.W.A/C.S./I.C.F.A etc.,

iv) M.Phil., Ph.D and Post Doctoral Programmes (D.Litt., D.Sc., etc)

v) L.L.M.

### Group-B

i) Graduate/Post graduate courses leading to Degree, Diploma, Certificate in areas like Pharmacy (B.Pharma,), Nursing(B Nursing) L,L,B, BFS, other Paramedical branches like rehabiliation, diagnostics etc., Mass Communication, Hotel Management & Catering, Travel/Toursim/Hospitality Management, Interior Decoration, Nutrition & Dietetics, Commercial Art, Financial Service (e.g Banking, Insurance, Taxation etc.) for which entrance qualification is minimum Sr. Secondary (10+2).

ii) Post Graduate courses not covered under Group A e.g. MA/M.sc.,/M.Com/M.Ed.,/M.Pharma., etc.,

### Group-C

All other courses leading to a graduate degree not covered under Group A & Group A & B e.g. BA/B.sc.,/ B.Com etc.,

### Group-D

All post-matriculation level non-degree courses for which entrance qualification is high School (Class X) both general and vocational stream, ITI courses, 3 year diploma courses in Polytechnics, etc.

V. Akkamahadevi 08/11/23

(ವಿ. ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

Scanned with CamScanner

**ಕರ್ನಾಟಕ ಸರ್ಕಾರ**

ಸಂಖ್ಯೆ: ಬಿಸಿಡಬ್ಲ್ಯೂ 521 ಬಿಎಂಎಸ್ 2024

ಕರ್ನಾಟಕ ಸರ್ಕಾದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 09.08.2024

**ತಿದ್ದುಪಡಿ**

ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮವನ್ನು ಅನುಷ್ಠಾಗೊಳಿಸುವ ಸಂಬಂಧ ಹೊರಡಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 445 ಬಿಎಂಎಸ್ 2023, ದಿನಾಂಕ: 08.11.2023ರಲ್ಲಿ ಈ ಕೆಳಕಂಡಂತೆ ತಿದ್ದುಪಡಿ ಮಾಡಿದ್ದು, ಅದರಂತೆ ತಿದ್ದಿ ಓದಿಕೊಳ್ಳತಕ್ಕದ್ದು.

| **ಮಾರ್ಗ ಸೂಚಿ ಕ್ರ ಸಂ** | **ಪ್ರಸ್ತುತ ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 445 ಬಿಎಂಎಸ್ 2023, ದಿನಾಂಕ: 08.11.2023ರಲ್ಲಿನ ಮಾರ್ಗಸೂಚಿಗಳು** | **ತಿದ್ದುಪಡಿ / ಸೇರ್ಪಡೆ ಮಾಡಲಾದ ಮಾರ್ಗಸೂಚಿಗಳು** |
|---|---|---|
| 2.6 | ಮ್ಯಾನೇಜ್‌ಮೆಂಟ್ ಕೋಟಾದ ಅಭ್ಯರ್ಥಿಗಳು ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ. | ಮ್ಯಾನೇಜ್‌ಮೆಂಟ್ ಕೋಟಾದ ಜೊತೆಗೆ Private Seat in Private College and COMED-K ವಿದ್ಯಾರ್ಥಿಗಳು ಸಹ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಪಡೆಯಲು ಅರ್ಹರಿರುವುದಿಲ್ಲ. |
| 2.11 | ಪ್ರಥಮ ಬಾರಿಗೆ ಸೌಲಭ್ಯವನ್ನು ಪಡೆಯಲು ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಕೆಳಗಿನಂತೆ ಕನಿಷ್ಟ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು :-<br>ಪ್ರವರ್ಗ-1 – 50%<br>ಪ್ರವರ್ಗ-2ಎ, 3ಎ, 3ಬಿ – 60%<br>ನವೀಕರಣ ವಿದ್ಯಾರ್ಥಿಗಳಕೆಳಗಿನಂತೆ ಕನಿಷ್ಟ ಅಂಗಳನ್ನು ಪಡೆದಿರಬೇಕು :-<br>ಪ್ರವರ್ಗ-1 – 60%<br>ಪ್ರವರ್ಗ-2ಎ, 3ಎ, 3ಬಿ – 65% | ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಕೆಳಗಿನಂತೆ ಕನಿಷ್ಟ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು:-<br>ಪ್ರವರ್ಗ-1 ಮತ್ತು ವಿಶೇಷ ಚೇತನ ವಿದ್ಯಾರ್ಥಿಗಳಿಗೆ- 60%<br>ಇತರೆ ಹಿಂದುಳಿದ ವರ್ಗಗಳ ಪ್ರವರ್ಗಗಳಿಗೆ-70% |

ಸದರಿ ತಿದ್ದುಪಡಿಯನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 792 ವೆಚ್ಚ-3/2023 ದಿನಾಂಕ:03.08.2024ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ. ಉಳಿದಂತೆ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 445 ಬಿಎಂಎಸ್ 2023, ದಿನಾಂಕ: 08.11.2023ರ ಆದೇಶ ಷರತ್ತುಗಳು ಯಥಾವತ್ತಾಗಿ ಅನ್ವಯಿಸುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ,

**(ಕೆ.ಅಶ್ವತ್ಥ್)** 09/8/24
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

09.08.24

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿ ಕಟ್ಟಡ, ಬೆಂಗಳೂರು.

12/8

3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ.
6. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಘಗಳ ಸಂಘ, ಬೆಂಗಳೂರು.
9. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು (ಆಯುಕ್ತರ ಮುಖಾಂತರ).
10. ಎಲ್ಲಾ ಜಿಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು (ಆಯುಕ್ತರ ಮುಖಾಂತರ).
11. ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು (ಆಯುಕ್ತರ ಮುಖಾಂಥರ).

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ಶುಲ್ಕ ಮರುಪಾವತಿ ಕಾರ್ಯಕ್ರಮದ ಮಾರ್ಗಸೂಚಿಗಳನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2013, ಬೆಂಗಳೂರು, ದಿನಾಂಕ: 05.10.2013.
2. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ429 ಬಿಎಂಎಸ್ 2014 ಬೆಂಗಳೂರು ದಿನಾಂಕ:04.09.2014.
3. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2013, ಬೆಂಗಳೂರು, ದಿನಾಂಕ: 27.01.2014.
4. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2013, ಬೆಂಗಳೂರು, ದಿನಾಂಕ: 20.02.2014.
5. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 589 ಬಿಎಂಎಸ್ 2013, ಬೆಂಗಳೂರು, ದಿನಾಂಕ: 06.08.2014.
6. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಹಿಂವಕ 23 ಬಿಎಂಎಸ್ 2021, ಬೆಂಗಳೂರು, ದಿನಾಂಕ: 08.02.2021.
7. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 357 ಬಿಎಂಎಸ್ 2020, ಬೆಂಗಳೂರು, ದಿನಾಂಕ: 16.07.2021.
8. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ PM-YASASVI ಮಾರ್ಗಸೂಚಿಗಳು(2021-2022 ರಿಂದ 2025-26).
9. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆBCWD-17/28/2023-BCWD_SCHLR-BCWD, ದಿನಾಂಕ:13.10.2023.

**ಪ್ರಸ್ತಾವನೆ:-**

ಮೇಲೆ ಓದಲಾದ (1)ರಿಂದ (7) ರವರೆಗಿನ ಆದೇಶಗಳಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ಶುಲ್ಕ ಮರುಪಾವತಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಸಂಬಂಧ, ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ. ಅದರಂತೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿರುತ್ತದೆ.

ಮೇಲೆ ಓದಲಾದ (8)ರಲ್ಲಿ ಪ್ರಸ್ತುತ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯು PM-YASASVI ಯೋಜನೆಯ (2021-2022 ರಿಂದ 2025-2026) ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ನೀಡಲಾಗಿರುವ ಮಾರ್ಗಸೂಚಿಗಳನ್ನು ಬದಲಾಯಿಸಿ ಆದೇಶ ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ (9)ರ ಆಯುಕ್ತರ ಪ್ರಸ್ತಾವನೆಯಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ಶುಲ್ಕ ಮರುಪಾವತಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಸಂಬಂಧ, ಈ ಹಿಂದಿನ ಸರ್ಕಾರದ ಆದೇಶಗಳಲ್ಲಿ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ. ಪ್ರಸ್ತುತ ಕೇಂದ್ರ ಸರ್ಕಾರವು PM YASASVI ಯೋಜನೆಯಡಿಯಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿಯಲ್ಲಿ ಕೆಲವು ಬದಲಾವಣೆಗಳನ್ನು ಮಾಡಲಾಗಿರುವುದರಿಂದ ಹಾಗೂ ಕಾರ್ಯಕ್ರಮದ ಅನುಷ್ಠಾನದಲ್ಲಿ ಕೆಲವು ಅಗತ್ಯ ಮಾರ್ಪಾಡುಗಳನ್ನು ಮಾಡುವ ಅವಶ್ಯಕತೆ ಇರುವ ಹಿನ್ನೆಲೆಯಲ್ಲಿ ಈ ಹಿಂದಿನ ಆದೇಶಗಳನ್ನು ನಿರಶನಗೊಳಿಸಿ, ಹೊಸದಾಗಿ ಕಾರ್ಯಕ್ರಮದ ಮಾರ್ಗಸೂಚಿಗಳಂತೆ ಪರಿಷ್ಕರಿಸಿ

.....2

06/11/23

Scanned with CamScanner

ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 551 ಬಿಎಂಎಸ್ 2023,**
**ಬೆಂಗಳೂರು, ದಿನಾಂಕ: 06.11.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗಾಗಿ ಶುಲ್ಕ ಮರುಪಾವತಿ ಕಾರ್ಯಕ್ರಮದ ಈ ಹಿಂದಿನ ಸರ್ಕಾರದ ಆದೇಶಗಳನ್ನು ನಿರಶನಗೊಳಿಸಿ, ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯ PM-YASASVI ಯೋಜನೆಯ ಮಾರ್ಗಸೂಚಿಗಳಂತೆ ಪರಿಷ್ಕರಿಸಿ, ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧ ರಲ್ಲಿರುವ ಮಾರ್ಗಸೂಚಿಗಳಂತೆ ಮೆಟ್ರಿಕ್-ನಂತರದ ಶುಲ್ಕ ಮರುಪಾವತಿ ಕಾರ್ಯಕ್ರಮವನ್ನು ಜಾರಿಗೊಳಿಸಲು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ/851/ವೆಚ್ಚ-3/2023, ದಿನಾಂಕ:03.11.2023ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಇಲಾಖಾ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

V. Akkamahadevi 06/11/23
(ವಿ. ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-3) ವಿಧಾನಸೌಧ, ಬೆಂಗಳೂರು.
7. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
8. ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.
9. ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು.
10. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಬೆಂಗಳೂರು.
11. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

....3

Scanned with CamScanner

ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 551 ಬಿಎಂಎಸ್ 2023, ದಿನಾಂಕ: 06.11.2023ಕ್ಕೆ

# ಅನುಬಂಧ

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್-ನಂತರದ ಶುಲ್ಕ ಮರುಪಾವತಿ ಕಾರ್ಯಕ್ರಮದ ಪರಿಷ್ಕೃತ ಮಾರ್ಗಸೂಚಿಗಳು

### 1. ಯೋಜನೆಯ ಉದ್ದೇಶ

1.1 ಕರ್ನಾಟಕ ರಾಜ್ಯದ ಶಾಸನಬದ್ಧ ವಿಶ್ವವಿದ್ಯಾಲಯಗಳ/ಡೀಮ್ಡ್ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ/ಸ್ಥಳೀಯ ಸಂಸ್ಥೆ/ಅನುದಾನಿತ ಸಂಸ್ಥೆಗಳು/ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸ್ಥಳೀಯ ಸಂಸ್ಥೆಗಳಲ್ಲಿ – ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸರ್ಕಾರಿ ಕೋಟಾದಲ್ಲಿ ಸೀಟು ಪಡೆದ ವಿದ್ಯಾರ್ಥಿಗಳಿಗೆ ಮಾತ್ರ ಶುಲ್ಕ ಮರುಪಾವತಿ ಮಾಡುವುದು ಯೋಜನೆಯ ಉದ್ದೇಶವಾಗಿರುತ್ತದೆ.

1.2 ಯಾವುದೇ ಸರ್ಕಾರಿ/ಖಾಸಗಿ ಸಂಸ್ಥೆಗಳಲ್ಲಿ ಉಚಿತ ಶಿಕ್ಷಣ ನೀಡಲಾಗುತ್ತದೆಯೋ (ಯಾವ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳಿಂದ ಶುಲ್ಕವನ್ನು ವಸೂಲಿ ಮಾಡುವುದಿಲ್ಲವೋ) ಅಂತಹ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳು ಶುಲ್ಕ ಮರುಪಾವತಿಗೆ ಅರ್ಹರಿರುವುದಿಲ್ಲ.

1.3 ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾದವರು, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು ಹಾಗೂ ಮಂಜೂರಾದ ಮೊತ್ತವನ್ನು ವಿದ್ಯಾರ್ಥಿಗಳ ಆಧಾರ್ ಸಂಖ್ಯೆ ಲಿಂಕ್ ಆಗಿರುವ ಬ್ಯಾಂಕ್ ಖಾತೆಗೆ ಜಮಾ ಮಾಡಬೇಕು.

### 2. ಅರ್ಹತೆ

2.1 ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.

2.2 ಕರ್ನಾಟಕ ರಾಜ್ಯದ ಶಾಸನಬದ್ಧ ವಿಶ್ವವಿದ್ಯಾಲಯಗಳ/ಡೀಮ್ಡ್ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ/ಸ್ಥಳೀಯ ಸಂಸ್ಥೆ/ಅನುದಾನಿತ ಸಂಸ್ಥೆಗಳು/ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸ್ಥಳೀಯ ಸಂಸ್ಥೆಗಳಲ್ಲಿ – ನಿಯಮಿತ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸರ್ಕಾರಿ ಕೋಟಾದಲ್ಲಿ ಸೀಟು ಪಡೆದ ವಿದ್ಯಾರ್ಥಿಗಳಿಗೆ ಮಾತ್ರ ಶುಲ್ಕ ಮರುಪಾವತಿ ಪಡೆಯಲು ಅರ್ಹರಿರುತ್ತಾರೆ. (ದೂರ ಶಿಕ್ಷಣ, ಮುಕ್ತ ವಿಶ್ವವಿದ್ಯಾಲಯ, ಸಂಜೆ ಕಾಲೇಜು ಮತ್ತು ಮ್ಯಾನೇಜ್‌ಮೆಂಟ್ ಕೋಟಾದಡಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದಡಿ ಶುಲ್ಕ ಮರುಪಾವತಿ ಪಡೆಯಲು ಅರ್ಹರಿರುವುದಿಲ್ಲ).

2.3 ಈ ಮೇಲಿನ ಸೌಲಭ್ಯ ಪಡೆಯಲು ವಿದ್ಯಾರ್ಥಿಯ, ತಂದೆ-ತಾಯಿ/ಪೋಷಕರ ಕುಟುಂಬದ, ಒಟ್ಟು ವಾರ್ಷಿಕ ವರಮಾನ (Gross Annual Income) ಈ ಕೆಳಗೆ ನಿಗದಿಪಡಿಸಿದ ಗರಿಷ್ಠ ಮಿತಿಯೊಳಗೆ ಇರಬೇಕು.

(ಅ) ಹಿಂದುಳಿದ ವರ್ಗಗಳ ಪ್ರವರ್ಗ-1 ರ ವಿದ್ಯಾರ್ಥಿಗಳಿಗೆ - ರೂ.2.50 ಲಕ್ಷ.

(ಆ) ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ, ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿದ ಮತ್ತು ಎಲ್ಲಾ ಧರ್ಮಗಳ, ಜಾತಿಗಳ ಹಾಗೂ ಸಮುದಾಯಗಳ ವಿದ್ಯಾರ್ಥಿಗಳಿಗೆ - ರೂ.1.00 ಲಕ್ಷ.

(ಆದರೆ, ಸಮಾಜ ಕಲ್ಯಾಣ ಪರಿಶಿಷ್ಟ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವ್ಯಾಪ್ತಿಗೆ ಬರುವ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸೌಲಭ್ಯಗಳನ್ನು ಪಡೆಯಲು ಅರ್ಹರಿರುವುದಿಲ್ಲ)

06/11/23



Scanned with CamScanner

೭

2.4 (ಅ) ಯೋಜನೆಯಡಿ ಪ್ರಥಮ ಬಾರಿಗೆ ಸೌಲಭ್ಯವನ್ನು ಪಡೆಯಲು, ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

ಪ್ರವರ್ಗ-1 ಮತ್ತು ಅಂಧ ವಿದ್ಯಾರ್ಥಿಗಳಿಗೆ - 40%
ಇತರೆ ಹಿಂದುಳಿದ ವರ್ಗಗಳ ಪ್ರವರ್ಗಗಳಿಗೆ - 50%

(ಆ) ನವೀಕರಣ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಬೇಕಾಗಿದ್ದಲ್ಲಿ, ಅವರು ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ, ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು .

ಪ್ರವರ್ಗ-1 ಮತ್ತು ಅಂಧ ವಿದ್ಯಾರ್ಥಿಗಳಿಗೆ - 50%
ಇತರೆ ಹಿಂದುಳಿದ ವರ್ಗಗಳ ಪ್ರವರ್ಗಗಳಿಗೆ - 60%

2.5 ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ. (ಉದಾ: ಬಿ.ಎ ನಂತರ ಬಿ.ಕಾಂ, ಎಂಎ (ಕನ್ನಡ) ನಂತರ ಎಂ.ಎ (ಇಂಗ್ಲೀಷ್), ಬಿ.ಎಡ್ ನಂತರ ಎಲ್.ಎಲ್.ಬಿ, ಇತ್ಯಾದಿಗಳಿಗೆ ಪ್ರವೇಶ ಪಡೆದಿದ್ದಲ್ಲಿ).

2.6 ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು, ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟೀಸ್ ಮಾಡುತ್ತಿದ್ದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

2.7 ಕಲೆ, ವಿಜ್ಞಾನ, ಹಾಗೂ ವಾಣಿಜ್ಯ ಕೋರ್ಸುಗಳ, ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ/ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೋಮ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ, ಹಾಗೂ ಇತರೆ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯ ಅಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

2.8 ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ, ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

**ಅ) ಶುಲ್ಕ ಮರುಪಾವತಿಗೆ ಅರ್ಹವಿರುವ ಶುಲ್ಕಗಳು**: ಸರ್ಕಾರದ ಕಾಲೇಜುಗಳಲ್ಲಿನ ಕೋರ್ಸುಗಳಿಗೆ ಸರ್ಕಾರಿ ನಿಗದಿಪಡಿಸುವ ದರಗಳಂತೆ ಈ ಕೆಳಗಿನ ಐದು ಶುಲ್ಕಗಳನ್ನು ಮಾತ್ರ ಮರುಪಾವತಿ ಮಾಡಲಾಗುವುದು.

i) ಬೋಧನಾ ಶುಲ್ಕ
ii)ಪ್ರಯೋಗಾಲಯ ಶುಲ್ಕ (ಯಾವ ಕೋರ್ಸುಗಳಲ್ಲಿ ಪ್ರಯೋಗಾಲಯ ಕಡ್ಡಾಯವಿದೆಯೋ ಆ ಕೋರ್ಸುಗಳಿಗೆ ಮಾತ್ರ)
iii) ಪರೀಕ್ಷಾ ಶುಲ್ಕ
iv) ಕ್ರೀಡಾ ಶುಲ್ಕ
v) ಗ್ರಂಥಾಲಯ ಶುಲ್ಕ

06/11/23

...3

Scanned with CamScanner

**(ಆ) Readers charges ದರಗಳು:**

ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಮೇಲಿನ ದರಗಳಂತೆ ಶುಲ್ಕ ವಿನಾಯಿತಿ ನೀಡುವುದರ ಜೊತೆಗೆ ಈ ಕೆಳಗಿನಂತೆ Readers charges ಅನ್ನು ಸಹ ಕರ್ನಾಟಕ ಸರ್ಕಾರದ ಅನುದಾನದಿಂದ ಪಾವತಿಸತಕ್ಕದ್ದು.

| ಕೋರ್ಸಿನ ಗುಂಪು | Readers charges (10 ತಿಂಗಳಿಗೆ) |
|---|---|
| ಗುಂಪು-ಎ, ಬಿ | ರೂ.1750/- |
| ಗುಂಪು-ಸಿ | ರೂ.1300/- |
| ಗುಂಪು-ಡಿ | ರೂ.900/- |

**3. ಶುಲ್ಕ ಮರುಪಾವತಿ ಮಂಜೂರಾತಿ ಪ್ರಾಧಿಕಾರ:**

ರಾಜ್ಯ ಸರ್ಕಾರದ ಅನುದಾನದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿಗೆ ಸಂಬಂಧಿಸಿದಂತೆ, ಆಯಾ ಜಿಲ್ಲೆಯ ಉಪ ನಿರ್ದೇಶಕರು/ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಶುಲ್ಕ ಮರುಪಾವತಿ ಮಂಜೂರು ಮಾಡುವ ಪ್ರಾಧಿಕಾರ ಆಗಿರುತ್ತಾರೆ.

**4. ಅರ್ಜಿ ಸಲ್ಲಿಸುವ ವಿಧಾನ:**

(ಅ) ಈ ಯೋಜನೆಯಡಿ ಸೌಲಭ್ಯ ಪಡೆಯಲು ಇಚ್ಛಿಸುವ ಹಾಗೂ ಅರ್ಹತೆಯುಳ್ಳ ವಿದ್ಯಾರ್ಥಿಗಳು, ಆನ್‌ಲೈನ್ ಮೂಲಕ ಎಲ್ಲಾ ವಿವರಗಳನ್ನು ನಮೂದಿಸಿ, ಆಯುಕ್ತರು, ನಿಗದಿಪಡಿಸುವ ಅಂತಿಮ ದಿನಾಂಕದೊಳಗಾಗಿ ಅರ್ಜಿ ಸಲ್ಲಿಸಬೇಕು.

(ಆ) ನವೀಕರಣ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಕಡ್ಡಾಯವಾಗಿ ಅರ್ಜಿ ಸಲ್ಲಿಸಬೇಕು.

(ಇ) ಯಾವುದಾದರೂ ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಬ್ಯಾಂಕಿನಲ್ಲಿ ವಿದ್ಯಾರ್ಥಿಯ ಹೆಸರಿನಲ್ಲಿ ಖಾತೆ ತೆರೆದಿದ್ದು, ಸದರಿ ಖಾತೆಗೆ ಕಡ್ಡಾಯವಾಗಿ ಆಧಾರ್ ಲಿಂಕ್ (NPCI Mapping) ಆಗಿರಬೇಕು.

(ಈ) ವಿದ್ಯಾರ್ಥಿಗೆ ನೀಡುವ ಸೌಲಭ್ಯಗಳು, ಅವರ ಶೈಕ್ಷಣಿಕ ಪ್ರಗತಿ ಮತ್ತು ಉತ್ತಮ ನಡತೆಗೆ ಒಳಪಟ್ಟಿರುತ್ತದೆ. ಆದ ಕಾರಣ, ಶೈಕ್ಷಣಿಕ ಪ್ರಗತಿಯು ತೃಪ್ತಿಕರವಾಗಿಲ್ಲದಿದ್ದಲ್ಲಿ, ಅಧಿಕೃತವಾಗಿ ಅನುಮತಿಯನ್ನು ಪಡೆಯದೇ ಪದೇ ಪದೇ ತರಗತಿಗಳಿಗೆ ಗೈರು ಹಾಜರಾದಲ್ಲಿ ಅಥವಾ ಇನ್ನಾವುದೇ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ್ದಲ್ಲಿ, ಅಂತಹ ವಿದ್ಯಾರ್ಥಿಗಳು ಈ ಸೌಲಭ್ಯಕ್ಕೆ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸತಕ್ಕದ್ದು ಮತ್ತು ಮಂಜೂರಾತಿ ಆಗಿದ್ದಲ್ಲಿ, ಅದನ್ನು ರದ್ದುಪಡಿಸತಕ್ಕದ್ದು.

**5.ಅನುದಾನ ಹಂಚಿಕೆ:**

ಸದರಿ ಕಾರ್ಯಕ್ರಮದಡಿ ಜಿಲ್ಲಾವಲಯ ಲೆಕ್ಕಶೀರ್ಷಿಕೆ:2225-00-103-0-28 (090)ರಡಿ ಒದಗಿಸಲಾಗುವ ಅನುದಾನದಲ್ಲಿ ಜಿಲ್ಲಾವಾರು ಅರ್ಹರಿರುವ ವಿದ್ಯಾರ್ಥಿಗಳ ಬೇಡಿಕೆಯನುಸಾರವಾಗಿ ಬಿಡುಗಡೆ ಮಾಡುವುದು.

(i) ಲಭ್ಯವಿರುವ ಅನುದಾನದ ಪೈಕಿ, ನಿಗದಿತ ಮೆರಿಟ್ ಮತ್ತು ಕುಟುಂಬದ ವಾರ್ಷಿಕ ವರಮಾನ ರೂ.1.00 ಲಕ್ಷ ಮಿತಿಯೊಳಗಿರುವ, ಪ್ರವರ್ಗ-1ರ ಎಲ್ಲಾ ವಿದ್ಯಾರ್ಥಿಗಳಿಗೆ, ಮೊದಲನೆಯ ಆದ್ಯತೆಯ ಮೇಲೆ ಶುಲ್ಕ ವಿನಾಯಿತಿ ನೀಡಬೇಕು.

06/11/23



Scanned with CamScanner

(ii)ಎಲ್ಲಾ ಅರ್ಹ ಅಂಧ ವಿದ್ಯಾರ್ಥಿಗಳಿಗೆ, Readers charges ಅನ್ನು ದ್ವಿತೀಯ ಆದ್ಯತೆ ಮೇಲೆ ಮಂಜೂರು ಮಾಡಬೇಕು.

(III) ಉಳಿದ ಮೊತ್ತವನ್ನು ಪ್ರವರ್ಗವಾರು ಈ ಕೆಳಗಿನ ಶೇಕಡವಾರು ಪ್ರಕಾರ ಹಂಚಿಕೆ ಮಾಡಬೇಕು.

| ಪ್ರವರ್ಗ | ನಿಗಧಿಪಡಿಸಿರುವ ಶೇಕಡಾವಾರು ಮೀಸಲಾತಿ |
|---|---|
| ಪ್ರವರ್ಗ-2ಎ | 63% |
| ಪ್ರವರ್ಗ-3ಎ | 16% |
| ಪ್ರವರ್ಗ-3ಬಿ | 20% |
| ಇತರೆ OBC (Other OBCs) | 1% |
| **ಒಟ್ಟು** | **100%** |

(IV) ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳ PM YASASVI ಮಾರ್ಗಸೂಚಿಗಳಲ್ಲಿ ವಿದ್ಯಾರ್ಥಿವೇತನದ ದರಗಳನ್ನು ಪರಿಷ್ಕರಿಸಲಾಗಿದ್ದು, ಕೆಲವು ಗುಂಪಿನ ಕೋರ್ಸುಗಳಿಗೆ ಶುಲ್ಕ ಮರುಪಾವತಿಗಿಂತ ಹೆಚ್ಚಿನ ದರಗಳನ್ನು ನಿಗಧಿಪಡಿಸಲಾಗಿದ್ದು, ಸದರಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುವುದು. ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳ PM YASASVI ಮಾರ್ಗಸೂಚಿಗಳಲ್ಲಿ ವಿದ್ಯಾರ್ಥಿವೇತನ ಪಡೆದ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಶುಲ್ಕ ಮರುಪಾವತಿ ಪಡೆಯಲು ಅರ್ಹರಿರುವುದಿಲ್ಲ.

(V) ಆ ಆರ್ಥಿಕ ವರ್ಷಕ್ಕೆ ಲಭ್ಯವಾಗುವ ಅನುದಾನದ ಮಿತಿಗೆ ಒಳಪಟ್ಟು, ಅರ್ಹತೆ ಮತ್ತು ಆದಾಯಕ್ಕೆ ಅನುಗುಣವಾಗಿ ಶುಲ್ಕ ಮರುಪಾವತಿ ಮಂಜೂರು ಮಾಡುವುದು.

**6. ಮಂಜೂರಾತಿ ವಿಧಾನ**

**6.1** ವಿದ್ಯಾರ್ಥಿಯು ಆನ್ ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಗಳನ್ನು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಆನ್‌ಲೈನ್‌ನಲ್ಲಿ ವಿದ್ಯಾರ್ಥಿಗಳು ಸಲ್ಲಿಸಿರುವ ದಾಖಲಾತಿಗಳ ವಿವರಗಳನ್ನು ಪರಿಶೀಲಿಸುವುದು.

**6.2** ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪರಿಶೀಲಿಸಿದ ಅರ್ಜಿಗಳನ್ನು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಶುಲ್ಕದ ದರಗಳನ್ನು ಪರಿಶೀಲಿಸಿ ಆನ್‌ಲೈನ್‌ನಲ್ಲಿ ಮಂಜೂರು ಮಾಡಲು ಕ್ರಮವಹಿಸುವುದು.

**6.3** ಮಂಜೂರಾತಿ ಪಡೆದ ವಿದ್ಯಾರ್ಥಿಗಳ ಆಧಾರ್ ಸೀಡ್ ಆಗಿರುವ ಬ್ಯಾಂಕ್ ಖಾತೆಗೆ ನೇರವಾಗಿ ಹಣ ವರ್ಗಾವಣೆ ಮಾಡಲು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು ಕ್ರಮಕೈಗೊಳ್ಳುವುದು.

**6.4** ಈ ಯೋಜನೆಯಡಿ ಮಂಜೂರಾದ ಶುಲ್ಕಗಳನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಆ ಆರ್ಥಿಕ ವರ್ಷದ ಒಳಗಾಗಿ ಒಂದೇ ಕಂತಿನಲ್ಲಿ ಜಮಾ ಮಾಡಬೇಕು.

06/11/23

...5

Scanned with CamScanner

**7. ತಪ್ಪು ಮಾಹಿತಿಗೆ ದಂಡ:**

1. ಅರ್ಜಿದಾರರು ಅಥವಾ ಶಿಕ್ಷಣ ಸಂಸ್ಥೆಯು, ತಪ್ಪು ಮಾಹಿತಿ ನೀಡಿದ್ದಲ್ಲಿ, ಅಂತಹವರ ವಿರುದ್ಧ ನಿಯಮಾನುಸಾರ ಈ ಕೆಳಗಿನಂತೆ ಕ್ರಮ ತೆಗೆದುಕೊಳ್ಳಲಾಗುವುದು.

2. ಭಾರತೀಯ ದಂಡ ಸಂಹಿತೆಯ ಕಲಂ 177 ಮತ್ತು 181ರ ಪ್ರಕಾರ, ಶಿಕ್ಷೆಗೆ ಗುರಿಪಡಿಸಲಾಗುತ್ತದೆ. ಕಾನೂನಿನಂತೆ ಕ್ರಮ ಜರುಗಿಸುವುದರ ಜೊತೆಗೆ, ವಿದ್ಯಾರ್ಥಿಯು ಪಡೆದ ಒಟ್ಟು ಆರ್ಥಿಕ ಸಹಾಯವನ್ನು ಆ ವಿದ್ಯಾರ್ಥಿಯಿಂದ ಅಥವಾ ಅವರ ತಂದೆ-ತಾಯಿ / ಪೋಷಕರಿಂದ, ಭೂ ಕಂದಾಯ ಬಾಕಿಯೆಂದು ವಸೂಲಿ ಮಾಡಲಾಗುವುದು.

3. ಮಂಜೂರು ಮಾಡುವ ಅಧಿಕಾರಿಗಳು ಸಹ, ನಿಯಮಗಳ ವಿರುದ್ಧ ಮಂಜೂರು ಮಾಡಿ, ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದಲ್ಲಿ, ಅಂತಹವರ ವಿರುದ್ಧ ಶಿಸ್ತಿನ ಕ್ರಮ ಜರುಗಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಹಾಗೂ ಈ ರೀತಿ ತಪ್ಪಾಗಿ ಪಾವತಿಯಾದ ಮೊತ್ತವನ್ನು ಅವರ ವೇತನದಿಂದ ವಸೂಲಿ ಮಾಡಲಾಗುವುದು.

**8. ಇತರೆ:**

1. ಪ್ರವರ್ಗವಾರು ಜಾತಿಗಳ ಪಟ್ಟಿ, ಕುಟುಂಬದ ವಾರ್ಷಿಕ ವರಮಾನ, ಅರ್ಹತೆ, ಇತ್ಯಾದಿ, ಸರ್ಕಾರವು ಕಾಲ ಕಾಲಕ್ಕೆ ಹೊರಡಿಸುವ ಆದೇಶಗಳನ್ವಯ ಪರಿಷ್ಕರಣೆಗೆ ಒಳಪಟ್ಟಿರುತ್ತದೆ.

2. ಈ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಅರ್ಜಿ ನಮೂನೆ, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಇತ್ಯಾದಿಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ನಿರ್ಧರಿಸುವುದು.

V. Akkamahadevi 06/11/23

**(ವಿ. ಅಕ್ಕಮಹಾದೇವಿ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

Scanned with CamScanner

**ಕರ್ನಾಟಕ ಸರ್ಕಾರ**

ಸಂಖ್ಯೆ: ಹಿಂವಕ 522 ಬಿಎಂಎಸ್ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ
ಬೆಂಗಳೂರು, ದಿನಾಂಕ:04.09.2024

**ತಿದ್ದುಪಡಿ**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗಾಗಿ ಶುಲ್ಕ ಮರುಪಾವತಿ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಹೊರಡಿಸಲಾದ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 551 ಬಿಎಂಎಸ್ 2023, ದಿನಾಂಕ:06.11.2023 ರ ಮಾರ್ಗಸೂಚಿಗಳಲ್ಲಿ ಈ ಕೆಳಕಂಡಂತೆ ತಿದ್ದುಪಡಿ ಮಾಡಿದ್ದು, ಅದರಂತೆ ತಿದ್ದಿ ಓದಿಕೊಳ್ಳತಕ್ಕದ್ದು.

| ಕ್ರ ಸಂ | ಪ್ರಸ್ತುತ ಇರುವ ಮಾರ್ಗಸೂಚಿ | ಮಾರ್ಗಸೂಚಿಯಲ್ಲಿ ಬದಲಾವಣೆ / ತಿದ್ದುಪಡಿ ಮಾಡಲಾದ ಅಂಶ |
|---|---|---|
| 1 | **ಮಾರ್ಗಸೂಚಿಯ ಕ್ರಮ ಸಂಖ್ಯೆ:2ರಲ್ಲಿನ 2.2** ರಲ್ಲಿ ಕರ್ನಾಟಕ ರಾಜ್ಯದ ಶಾಸನಬದ್ಧ ವಿಶ್ವವಿದ್ಯಾಲಯಗಳ/ಡೀಮ್ಡ್ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ/ಸ್ಥಳೀಯ/ ಸಂಸ್ಥೆ/ಅನುದಾನಿತ ಸಂಸ್ಥೆಗಳು/ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸ್ಥಳೀಯ ಸಂಸ್ಥೆಗಳಲ್ಲಿ- ನಿಯಮಿತ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸರ್ಕಾರ ಕೋಟಾದಲ್ಲಿ ಸೀಟು ಪಡೆದ ವಿದ್ಯಾರ್ಥಿಗಳಿಗೆ ಮಾತ್ರ ಶುಲ್ಕ ಮರುಪಾವತಿ ಪಡೆಯಲು ಅರ್ಹರಿರುತ್ತಾರೆ. (ದೂರ ಶಿಕ್ಷಣ, ಮುಕ್ತ ವಿಶ್ವವಿದ್ಯಾಲಯ, ಸಂಜೆ ಕಾಲೇಜು ಮತ್ತು ಮ್ಯಾನೇಜ್‌ಮೆಂಟ್ ಕೋಟಾದಡಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದಡಿ ಶುಲ್ಕ ಮರುಪಾವತಿ ಪಡೆಯಲು ಅರ್ಹರಿರುವುದಿಲ್ಲ). | ಕರ್ನಾಟಕ ರಾಜ್ಯದ ಶಾಸನಬದ್ಧ ವಿಶ್ವವಿದ್ಯಾಲಯಗಳ/ಡೀಮ್ಡ್ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ/ಸ್ಥಳೀಯ/ ಸಂಸ್ಥೆ/ಅನುದಾನಿತ ಸಂಸ್ಥೆಗಳು/ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸ್ಥಳೀಯ ಸಂಸ್ಥೆಗಳಲ್ಲಿ- ನಿಯಮಿತ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸರ್ಕಾರ ಕೋಟಾದಲ್ಲಿ ಸೀಟು ಪಡೆದ ವಿದ್ಯಾರ್ಥಿಗಳಿಗೆ ಮಾತ್ರ ಶುಲ್ಕ ಮರುಪಾವತಿ ಪಡೆಯಲು ಅರ್ಹರಿರುತ್ತಾರೆ. (ದೂರ ಶಿಕ್ಷಣ, ಮುಕ್ತ ವಿಶ್ವವಿದ್ಯಾಲಯ, ಸಂಜೆ ಕಾಲೇಜು ಮತ್ತು ಮ್ಯಾನೇಜ್‌ಮೆಂಟ್ ಕೋಟಾದಡಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಜೊತೆಗೆ Private Seat in Private college and COMED-K ಕೋಟಾದ ವಿದ್ಯಾರ್ಥಿಗಳು ಸಹ ಈ ಯೋಜನೆ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ). |
| 2 | ಸರ್ಕಾರದ ಪತ್ರ ಸಂ: ಇಡಿ/385/ಯುಆರ್‌ಸಿ/2022, ದಿನಾಂಕ: 16.10.2023ರಲ್ಲಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ಇವರು ವಿವಿಧ ಕಾರ್ಯಕ್ರಮಗಳಿಗೆ ಏಕರೂಪ ವಿದ್ಯಾರ್ಥಿ ಶುಲ್ಕಗಳನ್ನು ನಿಗದಿಪಡಿಸಲು ಏಕರೂಪ ಪರೀಕ್ಷಾ ಸಂಭಾವನೆಯನ್ನು ಗೊತ್ತುಪಡಿಸಿರುತ್ತಾರೆ. | ಆರ್ಥಿಕ ಇಲಾಖೆಯು ನಿಗದಿಪಡಿಸಿರುವ ಅನುದಾನದ ಮಿತಿಯನ್ನು ಗಮನದಲ್ಲಿಟ್ಟುಕೊಂಡು ಕೋರ್ಸ್‌ವಾರು ಶುಲ್ಕವನ್ನು ನಿಗದಿಪಡಿಸುವುದು **(ಅನುಬಂಧದಲ್ಲಿ ಲಗತ್ತಿಸಿದೆ)** ವಿಶ್ವ ವಿದ್ಯಾಲಯಗಳು ನಿಗದಿಪಡಿಸುವ ದರ ಅಥವಾ ಇಲಾಖೆಯಿಂದ ನಿಗದಿಪಡಿಸುವ ದರಗಳಲ್ಲಿ ಯಾವುದು ಕಡಿಮೆಯೋ ಆ ದರಗಳನ್ನು ಪಾವತಿಸತಕ್ಕದ್ದು. |

...2

| | | |
|---|---|---|
| 3. | **ಮಾರ್ಗಸೂಚಿ ಸಂ: 2.4** (ಅ)ರ ಪ್ರಕಾರ ಪ್ರಥಮ ಬಾರಿಗೆ ಸೌಲಭ್ಯವನ್ನು ಪಡೆಯಲು ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಪ್ರವರ್ಗ-1 ಮತ್ತು ಅಂಧ ವಿದ್ಯಾರ್ಥಿಗಳಿಗೆ ಶೇ.40 ಅಂಕಗಳನ್ನು ಪಡೆದಿರಬೇಕು.<br>2.4(ಆ) ಪ್ರಕಾರ ನವೀಕರಣ ವಿದ್ಯಾರ್ಥಿಗಳಿಗೆ ಪ್ರವರ್ಗ-1 ಮತ್ತು ಅಂಧ ವಿದ್ಯಾರ್ಥಿಗಳಿಗೆ ಶೇ.50 ಅಂಕ ಪಡೆದಿರಬೇಕು. | ಬದಲಾಗಿ 2.4 (ಅ) & (ಆ)ರಲ್ಲಿ ಪ್ರವರ್ಗ-1 ಅಂಧ ವಿದ್ಯಾರ್ಥಿಗಳಿಗೆ ಬದಲಾಗಿ ವಿಶೇಷಚೇತನರಿಗೆ ಎಂದು ಪರಿಗಣಿಸತಕ್ಕದ್ದು ಹಾಗೂ ಸದರಿಯವರಿಗೆ ಶೇ.5ರಷ್ಟು ಮೀಸಲಾತಿ ನೀಡತಕ್ಕದ್ದು. |
| 4. | ಕೋರ್ಸ್ ಪ್ರಾರಂಭದಿಂದ ಮುಗಿಯುವವರೆಗೆ ಶುಲ್ಕ ಮರುಪಾವತಿ ಕಾರ್ಯಕ್ರಮ ಅಥವಾ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳಲ್ಲಿ ಯಾವುದಾದರೂ ಒಂದು ವಿದ್ಯಾರ್ಥಿ ವೇತನಕ್ಕೆ ಅರ್ಹರಿರುತ್ತಾರೆ. (ಉದಾ: 2023-24ನೇ ಸಾಲಿನಲ್ಲಿ ಪ್ರಥಮ ಪಿಯುಸಿ ಓದುತ್ತಿರುವ ವಿದ್ಯಾರ್ಥಿಗೆ ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಮಂಜೂರಾಗಿದ್ದಲ್ಲಿ ದ್ವಿತೀಯ ಪಿಯುಸಿಗೂ ಸಹ ಅದೇ ಕಾರ್ಯಕ್ರಮದಡಿ ಅರ್ಹತೆಯಿದ್ದಲ್ಲಿ ವಿದ್ಯಾರ್ಥಿ ವೇತನ ಪಡೆಯಲು ಅರ್ಹತೆ ಪಡೆಯಲು ಪರಿಗಣಿಸತಕ್ಕದ್ದು) | |
| 5. | ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.<br>ಪ್ರಥಮ ಬಾರಿಗೆ ಈ ಸೌಲಭ್ಯ ಪಡೆಯಲು<br>(1) ಪ್ರವರ್ಗ-1 ಮತ್ತು ಅಂಧ ವಿದ್ಯಾರ್ಥಿಗಳಿಗೆ – 40%<br>(2) ಇತರೆ ಹಿಂದುಳಿದ ವರ್ಗಗಳ ಪ್ರವರ್ಗಗಳಿಗೆ -50%<br>ನವೀಕರಣ ವಿದ್ಯಾರ್ಥಿಗಳು ಈ ಸೌಲಭ್ಯ ಪಡೆಯಲು<br>(1) ಪ್ರವರ್ಗ-1 ಮತ್ತು ಅಂಧ ವಿದ್ಯಾರ್ಥಿಗಳಿಗೆ – 50%<br>(2) ಇತರೆ ಹಿಂದುಳಿದ ವರ್ಗಗಳ ಪ್ರವರ್ಗಗಳಿಗೆ - 60% | ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.<br>(1) ಪ್ರವರ್ಗ-1 ಮತ್ತು ವಿಶೇಷ ಚೇತನ ವಿದ್ಯಾರ್ಥಿಗಳಿಗೆ – 50%<br>(2) ಇತರೆ ಹಿಂದುಳಿದ ವರ್ಗಗಳ ಪ್ರವರ್ಗಗಳಿಗೆ - 60% |
| 6. | ಶುಲ್ಕ ಮರುಪಾವತಿ ಕಾರ್ಯಕ್ರಮವು ರಾಜ್ಯ ಪ್ರಾಯೋಜಿತ ಯೋಜನೆಯಾಗಿರುವ ಕಾರಣ National Importance ಕಾಲೇಜುಗಳಾದ NIT, IIT, IIIT, IIPM, ESIC, IISC, IIM ಇತರೆ ಕಾಲೇಜುಗಳ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರದ ಸಮಾನಾಂತರ ಕಾಲೇಜುಗಳಲ್ಲಿ ನೀಡುವ ಶುಲ್ಕದರಗಳನ್ನು ಮಂಜೂರು ಮಾಡತಕ್ಕದ್ದು. | |

ಈ ತಿದ್ದುಪಡಿಯನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 851 ವೆಚ್ಚ-3/2023, ದಿನಾಂಕ:28.08.2024ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ ಹಾಗೂ ಉಳಿದಂತೆ ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 551 ಬಿಎಂಎಸ್ 2023, ದಿನಾಂಕ: 06.11.2023 ರ ಮಾರ್ಗಸೂಚಿಗಳಲ್ಲಿನ ಈ ಹಿಂದೆ ನಮೂದಿಸಿರುವ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಅನ್ವಯಿಸುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

4/9/24

**(ಕೆ.ಅಶ್ವತ್ಥ)**
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

04.09.24

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ)

3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು (ಆಯುಕ್ತರ ಮುಖಾಂತರ).

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ522 ಬಿಎಂಎಸ್ 2024 ದಿನಾಂಕ:04.09.2024 ರ ತಿದ್ದುಪಡಿಗೆ ಅನುಬಂಧ**

| ಕ್ರ. ಸಂ | ಕೋರ್ಸ್ ಗುಂಪು | ಕೋರ್ಸ್ ನ ವಿವರ | ನಿಗಧಿ ಪಡಿಸಿದ ಶುಲ್ಕ ಮರುಪಾವತಿ ದರ |
|---|---|---|---|
| 1 | ಗುಂಪು 'A' ಕೋರ್ಸ್ ಗಳು | ವೃತ್ತಿಪರ ವೈದ್ಯಕೀಯ ಸ್ನಾತಕೋತರ ಪದವಿ ಕೋರ್ಸ್ ಗಳು | ರೂ. 1,00,000/-ರವರೆಗೆ |
| | | ವೃತ್ತಿಪರ ವೈದ್ಯಕೀಯ ಪದವಿ ಹಾಗೂ ಡಿಪ್ಲೋಮಾ ಕೋರ್ಸ್ ಗಳು | ರೂ. 50,000/- ರವರೆಗೆ |
| | | ಇಂಜಿನಿಯರಿಂಗ್ ಸ್ನಾತಕೋತ್ತರ ಕೋರ್ಸ್ ಗಳು | ರೂ. 20,000/-ರವರೆಗೆ |
| | | ಇಂಜಿನಿಯರಿಂಗ್ ಪದವಿ ಕೋರ್ಸ್ ಗಳು | ರೂ. 18,000/-ರವರೆಗೆ |
| | | ವೃತ್ತಿಪರ ಪದವಿ ಕೋರ್ಸ್ ಗಳು | ರೂ. 15,000/-ರವರೆಗೆ |
| | | ವೃತ್ತಿಪರ ಸ್ನಾತಕೋತ್ತರ ಕೋರ್ಸ್ ಗಳು | ರೂ. 20,000/-ರವರೆಗೆ |
| | | ಪಿ.ಎಚ್.ಡಿ | ರೂ. 20,000/-ರವರೆಗೆ |
| 2 | ಗುಂಪು 'B' ಕೋರ್ಸ್ ಗಳು | ಫಾರ್ಮಸಿ ಪದವಿ, ಸ್ನಾತಕೋತ್ತರ ಪದವಿ ಫಾರ್ಮಸಿ , M Sc ನರ್ಸಿಂಗ್, ಮತ್ತು ವೃತ್ತಿಪರ ಡಿಪ್ಲೋಮಾ ಕೋರ್ಸ್ ಗಳು | ರೂ. 25,000/- ರವರೆಗೆ |
| | | M Sc ಅಲೈಡ್ ಸೈನ್ಸಸ್ ಮತ್ತು ಇತರೆ ವೈದ್ಯಕೀಯ M Sc ಕೋರ್ಸ್ ಗಳು | ರೂ. 15,000/-ರವರೆಗೆ |
| | | ಸಾಮನ್ಯ ಸ್ನಾತಕೋತರ ಪದವಿ (ಕಲಾ, ವಾಣಿಜ್ಯ, ವಿಜ್ಞಾನ) ಕೋರ್ಸ್ ಗಳು | ರೂ. 10,000/-ರವರೆಗೆ |
| | | ಸ್ನಾತಕೋತರ ಡಿಪ್ಲೋಮಾ ಹಾಗೂ BA LLB(HONS) & BBA LLB(HONS) | ರೂ. 1,00,000/-ರವರೆಗೆ |
| 3 | ಗುಂಪು 'C' ಕೋರ್ಸ್ ಗಳು | ಎಲ್ಲಾ, ಸಾಮಾನ್ಯ ಪದವಿ (ಕಲಾ, ವಾಣಿಜ್ಯ, ವಿಜ್ಞಾನ) ಕೋರ್ಸ್ ಗಳು | ರೂ. 4,000/-ರವರೆಗೆ |
| | | ಸಂಯೋಜಿತ ಉಭಯ ಪದವಿ ಕೋರ್ಸ್ ಗಳು | ರೂ. 5,000/-ರವರೆಗೆ |

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ522 ಬಿಎಂಎಸ್ 2024 ದಿನಾಂಕ:04.09.2024 ರ ತಿದ್ದುಪಡಿಗೆ ಅನುಬಂಧ**

| ಕ್ರ. ಸಂ | ಕೋರ್ಸ್ ಗುಂಪು | ಕೋರ್ಸ್ ನ ವಿವರ | ನಿಗಧಿ ಪಡಿಸಿದ ಶುಲ್ಕ ಮರುಪಾವತಿ ದರ |
|---|---|---|---|
| 4 | ಗುಂಪು 'D' ಕೋರ್ಸ್ ಗಳು | ಎಲ್ಲಾ ಸಾಮಾನ್ಯ ಡಿಪ್ಲೋಮಾ ಕೋರ್ಸ್ ಗಳಿಗೆ | ರೂ. 4,000/-ರವರೆಗೆ |
| | | ಪಿ.ಯು.ಸಿ , ಐ.ಟಿ.ಐ, ವೊಕೇಷನಲ್ ಡಿಪ್ಲೋಮಾ ಮತ್ತು ಸರ್ಟಿಫಿಕೆಟ್ ಕೋರ್ಸ್ ಗಳಿಗೆ | ರೂ. 2,000/-ರವರೆಗೆ |
| | | ಡಿಪ್ಲೋಮಾ ಪಾರ್ಮಸಿ, D.ED, D.Ed.SPL.EDU. ಹಾಗೂ ಇದರ ಸಮನಾಂತರ ಕೋರ್ಸ್ ಗಳಿಗೆ | ರೂ. 1,500/-ರವರೆಗೆ |

4/9/24

**(ಕೆ.ಅಶ್ವತ್ಥ)**
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

೦೪.೦೯.೨೪

ಕರ್ನಾಟಕ ಸರ್ಕಾರದ ನಡವಳಿ

ವಿಷಯ:- ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಅನುಷ್ಠಾನಗೊಳಿಸುತ್ತಿರುವ ರಾಜ್ಯದ "ಹೆಚ್ಚುವರಿ ಭೋಜನಾ ವೆಚ್ಚ" ಕಾರ್ಯಕ್ರಮಕ್ಕೆ ಬದಲಾಗಿ "ಊಟ ಮತ್ತು ವಸತಿ ಸಹಾಯ ಯೋಜನೆ" ಕಾರ್ಯಕ್ರಮ ಮಂಜೂರಾತಿ ಹಾಗೂ ಅನುಷ್ಠಾನದ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

ಓದಲಾಗಿದೆ:-
1. ಸರ್ಕಾರಿ ಆದೇಶ ಸಂಖ್ಯೆ:ಎಸ್‌ಡಬ್ಲ್ಯುಎಲ್ 115 ಬಿಎಂಎಸ್ 79, ದಿ.25.12.79
2. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯುಎಲ್ 22 ಬಿಪಿಎಸ್, ದಿ.10.10.1990
3. ಸರ್ಕಾರಿ ಆದೇಶ ಸಂಖ್ಯೆ:ಸಕಕಾ 22 ಬಿಪಿಎಸ್ 89, ದಿ.31.01.1990
4. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯುಎಲ್ 53 ಬಿಪಿಎಸ್ 91, ದಿ.30.08.1991 ಮತ್ತು 06.01.1992 .
5. ಸರ್ಕಾರಿ ಆದೇಶ ಸಂಖ್ಯೆ: ಸಕಇ 100 ಬಿಎಂಎಸ್ 2002, ದಿ.06.07.2002
6. ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಪರಿಷ್ಕೃತ ಆದೇಶ ಸಂಖ್ಯೆ 11014/21/2006-ಬಿಸಿ-I, ದಿನಾಂಕ 11.08.2011
7. ದಿನಾಂಕ:12.07.2013ರಂದು ಮಂಡಿಸಿದ 2013-14ನೇ ಸಾಲಿನ ಪರಿಷ್ಕೃತ ಆಯವ್ಯಯ ಭಾಷಣದಲ್ಲಿನ ಘೋಷಣೆ ಕಂಡಿಕೆ ಸಂಖ್ಯೆ:271
8. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ಪಿಎಂಎಸ್-ಡಿಬಿಟಿ/ಸಿಆರ್-10/2013-14, ದಿನಾಂಕ 15.08.2013

******

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಿಂದ (5)ರಲ್ಲಿನ ಆದೇಶಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ "ಹೆಚ್ಚುವರಿ ಭೋಜನಾ ವೆಚ್ಚ" ಮಂಜೂರು ಮಾಡಲು ಆದೇಶ/ಮಾರ್ಗಸೂಚಿಗಳನ್ನು ನೀಡಲಾಗಿತ್ತು. ಸದರಿ ಸರ್ಕಾರದ ಆದೇಶಗಳಂತೆ ಮಂಜೂರು ಮಾಡಲಾಗುತ್ತಿದ್ದ ದರಗಳು ಬಹಳ ಕಡಿಮೆ ಇದ್ದು, ಮಂಜೂರಾತಿ ಷರತ್ತುಗಳೂ ಸಹ ಈಗಿನ ಸನ್ನಿವೇಶದಲ್ಲಿ ಪ್ರಸ್ತುತ ಇಲ್ಲದಿರುವ ಕಾರಣ, ಈ ಆದೇಶಗಳನ್ನು ನಿರಸನಗೊಳಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ (6)ರಲ್ಲಿನ ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಲ್ಲಿ, ನಿಗದಿಪಡಿಸಿರುವ ಷರತ್ತುಗಳನ್ನು ಅಳವಡಿಸಿಕೊಂಡು, ಹೊಸದಾಗಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ 2013-14ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ **"ಊಟ ಮತ್ತು ವಸತಿ ಸಹಾಯ ಯೋಜನೆ"**, ಕಾರ್ಯಕ್ರಮವನ್ನು ಜಾರಿಗೊಳಿಸಲು ಮಂಜೂರಾತಿ ನೀಡಬೇಕೆಂದು ಕೋರಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ(8)ರ ಏಕ ಕಡತದ ಮುಖೇನ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಿದರೂ ಸಹ, ವಿದ್ಯಾರ್ಥಿನಿಲಯಗಳಿಗೆ ಅಗತ್ಯವಿರುವಷ್ಟು ಸ್ಥಳಾವಕಾಶ, ಶೌಚಾಲಯಗಳು ಹಾಗೂ ಸ್ನಾನ ಗೃಹಗಳು ಇರುವ ಖಾಸಗಿ ಕಟ್ಟಡಗಳು ಲಭ್ಯವಾಗುತ್ತಿಲ್ಲ. ಸಾರ್ವಜನಿಕರು ಖಾಸಗಿ ಕಟ್ಟಡವನ್ನು ವಿದ್ಯಾರ್ಥಿನಿಲಯಗಳಿಗಾಗಿ ಬಾಡಿಗೆಗೆ ನೀಡಲು ಮುಂದೆ ಬರುತ್ತಿಲ್ಲ ಹಾಗೂ ಕೆಲವು ಕಡೆ ಬಾಡಿಗೆಗೆ ಕಟ್ಟಡಗಳು ಲಭ್ಯವಾದರೂ ಸಹ, ಅವುಗಳಲ್ಲಿನ ಕೊಠಡಿಗಳ ಅಳತೆ ತೀರಾ ಕಡಿಮೆ ಇರುವುದರಿಂದ ಒಂದು ಚಿಕ್ಕ ಕೊಠಡಿಯಲ್ಲಿ 5 ರಿಂದ 8 ಮಂದಿ ವಿದ್ಯಾರ್ಥಿಗಳಿಗೆ ಅವಕಾಶ ನೀಡಿದ್ದು, ತೀರಾ ಇಕ್ಕಟ್ಟಿನ ಪರಿಸ್ಥಿತಿಯಲ್ಲಿ ಇವರು ವಾಸವಿರುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಅವರ ವಿದ್ಯಾಭ್ಯಾಸಕ್ಕೆ ಹಾಗೂ ಅವರ ಒಟ್ಟಾರೆ ಆರೋಗ್ಯಕ್ಕೆ ತೊಂದರೆಯಾಗುತ್ತಿದೆ.

ಈ ಹಿನ್ನಲೆಯಲ್ಲಿ ಹಾಗೂ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅತೀ ಹೆಚ್ಚಿನ ಬೇಡಿಕೆ ಇರುವುದರಿಂದ, ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ದೊರಕದ ಹಾಗೂ ಮೆರಿಟ್ ಹೊಂದಿರುವ ವಿದ್ಯಾರ್ಥಿಗಳಿಗೆ, ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳಿಗೆ 1,500/- ರೂ.ನಂತೆ ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟು 15,000 ರೂ.ಗಳನ್ನು ಅವರ ಬ್ಯಾಂಕ್ ಖಾತೆಗಳಿಗೆ ಆನ್‌ಲೈನ್ ಮುಖಾಂತರ ಜಮಾ ಮಾಡುವ "ಊಟ ಮತ್ತು ವಸತಿ ಸಹಾಯ ಯೋಜನೆ" ಯನ್ನು ಜಾರಿಗೆ ತರಲು ಸರ್ಕಾರ ನಿರ್ಣಯಿಸಿದೆ. ಅದರಂತೆ ಈ ಆದೇಶ.

..2

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 516 ಬಿಎಂಎಸ್ 2013, ಬೆಂಗಳೂರು**
**ದಿನಾಂಕ:24.09.2013**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ, ಮೇಲೆ ಓದಲಾದ ಕ್ರಮ ಸಂಖ್ಯೆ(1) ರಿಂದ (5)ರವರೆಗಿನ ಸರ್ಕಾರದ ಆದೇಶಗಳನ್ನು ನಿರಸನಗೊಳಿಸಿ(supersession), ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ಅನುಷ್ಠಾನಗೊಳಿಸುತ್ತಿರುವ ರಾಜ್ಯದ ಹೆಚ್ಚುವರಿ ಭೋಜನಾ ವೆಚ್ಚ ಕಾರ್ಯಕ್ರಮಕ್ಕೆ ಬದಲಾಗಿ, ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಲ್ಲಿ ನಿಗದಿಪಡಿಸಿರುವ ಷರತ್ತುಗಳನ್ನು ಅಳವಡಿಸಿಕೊಂಡು, **ಹೊಸದಾಗಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ**, ಈ ಆದೇಶದ **ಅನುಬಂಧದಲ್ಲಿರುವ** ಮಾರ್ಗಸೂಚಿಗಳ ಪ್ರಕಾರ **"ಊಟ ಮತ್ತು ವಸತಿ ಸಹಾಯ ಯೋಜನೆ"**, ಕಾರ್ಯಕ್ರಮವನ್ನು ಜಾರಿಗೊಳಿಸಲು ಆದೇಶಿಸಿದೆ.

ಈ ಯೋಜನೆಯಡಿ ಸೌಲಭ್ಯವನ್ನು, ಆಯಾ ಆರ್ಥಿಕ ವರ್ಷದಲ್ಲಿ ಲಭ್ಯವಿರುವ ಅನುದಾನದ ಮಿತಿಗೆ ಒಳಪಟ್ಟು, ಮಂಜೂರು ಮಾಡತಕ್ಕದ್ದು. ಈ ಯೋಜನೆಗೆ ತಗಲುವ ವೆಚ್ಚವನ್ನು, ರಾಜ್ಯವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-800-0-31ರಡಿ ಒದಗಿಸುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯು ಅನಧಿಕೃತ ಟಿಪ್ಪಣಿ ಸಂಖ್ಯೆ:ಪಿಡಿ 44 ಐಎಂಎಂ2013, ದಿ.28.08.2013ರಲ್ಲಿ ನೀಡಿರುವ ಮತ್ತು ಆರ್ಥಿಕ ಇಲಾಖೆಯು ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 604 ವೆಚ್ಚ-3/13, ದಿ.31.08.2013ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ
ಬಿ.ಹೆಚ್. ಅನಿಲ್
(ಬಿ.ಹೆಚ್.ಅನಿಲ್ ಕುಮಾರ್) 24/9/2013
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

ಕರ್ನಾಟಕ ರಾಜ್ಯಪತ್ರದ ಸಂಕಲನಕಾರರು, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯಪತ್ರದ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 10000 ಪ್ರತಿಗಳನ್ನು ನೇರವಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಕಳುಹಿಸಿಕೊಡತಕ್ಕದ್ದು.

ಗೆ,

1. ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
9. ರಾಜ್ಯ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ
10. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
11. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ
12. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
13. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
15. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು
16. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-3), ವಿಧಾನಸೌಧ, ಬೆಂಗಳೂರು.
17. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ:ಹಿಂವಕ 516 ಬಿಎಂಎಸ್ 2013, ದಿನಾಂಕ 24.09.2013 ಕ್ಕೆ ಅನುಬಂಧ

ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ "ಊಟ ಮತ್ತು ವಸತಿ ಸಹಾಯ ಯೋಜನೆ" ಕಾರ್ಯಕ್ರಮ ಅನುಷ್ಠಾನದ ಮಾರ್ಗಸೂಚಿಗಳು.

(ಸಮಾಜ ಕಲ್ಯಾಣ /ಪರಿಶಿಷ್ಟ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವ್ಯಾಪ್ತಿಗೆ ಬರುವ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸೌಲಭ್ಯಗಳನ್ನು ಪಡೆಯಲು ಅರ್ಹರಿರುವುದಿಲ್ಲ.)

## I. ಯೋಜನೆಯ ಉದ್ದೇಶ:

(ಅ) ಯಾವುದೇ ಇಲಾಖೆಯ ಸರ್ಕಾರಿ / ಸರ್ಕಾರಿ ಅನುದಾನಿತ ವಿದ್ಯಾರ್ಥಿನಿಲಯ / ವಸತಿ ಕಾಲೇಜುಗಳಲ್ಲಿ, ಪ್ರವೇಶ ದೊರೆಯದ ಹಾಗೂ ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ, **ಊಟ ಮತ್ತು ವಸತಿ ಸಹಾಯವನ್ನು** ಒದಗಿಸುವುದು, ಈ ಯೋಜನೆಯ ಉದ್ದೇಶ.

(ಆ) ಈ ಯೋಜನೆಯಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ, ಪ್ರತಿ ತಿಂಗಳಿಗೆ ರೂ.1500/-ರಂತೆ, ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟು ರೂ.15,000/- ಸಹಾಯಧನವನ್ನು, ಇತರೆ ನಿಬಂಧನೆಗಳಿಗೊಳಪಟ್ಟು, ಅವರು ಯಾವುದಾದರೂ ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಬ್ಯಾಂಕಿನಲ್ಲಿ ತೆರೆದಿರುವ ಬ್ಯಾಂಕ್ ಖಾತೆಗೆ, ಆನ್‌ಲೈನ್ ಮೂಲಕ ಜಮಾ ಮಾಡುವುದು.

(ಇ) **ವಿದ್ಯಾರ್ಥಿಗಳು (i)ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ, (ii) ಊಟ ಮತ್ತು ವಸತಿ ಸಹಾಯ ಯೋಜನೆ ಮತ್ತು (iii)**. ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ - ಇವುಗಳಲ್ಲಿ ಯಾವುದಾದರೂ ಒಂದು ಸೌಲಭ್ಯಕ್ಕೆ ಮಾತ್ರ ಅರ್ಹರಿರುತ್ತಾರೆ.

(ಈ) ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾದವರು, ಆನ್‌ಲೈನ್ (Online) ಮೂಲಕ ಅರ್ಜಿ ಸಲ್ಲಿಸಬೇಕು.

## II. ಅರ್ಹತೆ:

1. (ಅ) ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿ ಆಗಿರಬೇಕು.

   (ಆ) ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ, ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.

   (ಇ) ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ / ಸ್ಥಳೀಯ ಸಂಸ್ಥೆ/ ಅನುದಾನಿತ ಸಂಸ್ಥೆಗಳು / ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸಂಸ್ಥೆಗಳಲ್ಲಿ - ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಾಗಿರಬೇಕು.

2. (ಅ) ಈ ಮೇಲಿನ ಸೌಲಭ್ಯ ಪಡೆಯಲು ವಿದ್ಯಾರ್ಥಿಯ, ತಂದೆ-ತಾಯಿ/ಪೋಷಕರ ಕುಟುಂಬದ, ಒಟ್ಟು ವಾರ್ಷಿಕ ವರಮಾನ (Gross Annual Income) ಈ ಕೆಳಗೆ ನಿಗದಿಪಡಿಸಿದ ಮಿತಿಯೊಳಗೆ ಇರಬೇಕು.

   (i) ಪ್ರವರ್ಗ-1 ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ

   (ii) ಪ್ರವರ್ಗ-2ಎ, 3ಎ ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ

   (ಆ) ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದವಾಗಿರಬೇಕು ಹಾಗೂ ವ್ಯಾಸಂಗ ಮಾಡುವ ಕಾಲೇಜಿನಿಂದ ಕನಿಷ್ಟ 5 ಕಿ.ಮೀ. ದೂರದವರಾಗಿರಬೇಕು. ಆದರೆ, ವಿದ್ಯಾರ್ಥಿಯ ಸ್ವಂತ

..2

ಸ್ಥಳ,ನಗರ/ಪಟ್ಟಣ ಆಗಿದ್ದು, ಅವರು ಬೇರೆ ನಗರ/ಪಟ್ಟಣದಲ್ಲಿ ಇರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆ.

(ಇ) ಈ ಯೋಜನೆಯಡಿ ಪ್ರಥಮ ಬಾರಿಗೆ ಸೌಲಭ್ಯವನ್ನು ಪಡೆಯಲು, ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ, ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

| | |
|---|---|
| ಪ್ರವರ್ಗ–1 | – 40% |
| ಪ್ರವರ್ಗ–2ಎ, 3ಎ, 3ಬಿ | – 50% |

(ಈ) ನವೀಕರಣ ವಿದ್ಯಾರ್ಥಿಗಳು ಈ ಯೋಜನೆ ಸೌಲಭ್ಯಕ್ಕೆ ಅರ್ಹರಾಗಲು, ಅವರು ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ, ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

| | |
|---|---|
| ಪ್ರವರ್ಗ–1 | – 50% |
| ಪ್ರವರ್ಗ–2ಎ, 3ಎ, 3ಬಿ | – 60% |

(ಒಂದು ವೇಳೆ, ವೈದ್ಯಕೀಯ ಕಾರಣಗಳಿಂದಾಗಿ ಪರೀಕ್ಷೆಗೆ ಹಾಜರಾಗಲು ಸಾಧ್ಯವಾಗದಿದ್ದಲ್ಲಿ, ಅಂತಹವರು, ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರ ಪಡೆದು ಸಲ್ಲಿಸಬೇಕು.)

3. (ಅ) ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ. (ಉದಾ: ಬಿ.ಎ ನಂತರ ಬಿ.ಕಾಂ, ಎಂ.ಎ (ಕನ್ನಡ) ನಂತರ ಎಂ.ಎ (ಇಂಗ್ಲೀಷ್), ಬಿ.ಎಡ್ ನಂತರ ಎಲ್.ಎಲ್.ಬಿ, ಇತ್ಯಾದಿಗಳಿಗೆ ಪ್ರವೇಶ ಪಡೆದಿದ್ದಲ್ಲಿ)

(ಆ) ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು, ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟೀಸ್ ಮಾಡುತ್ತಿದ್ದಲ್ಲಿ. ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

(ಇ) ಕಲೆ, ವಿಜ್ಞಾನ, ಹಾಗೂ ವಾಣಿಜ್ಯ ಕೋರ್ಸುಗಳ, ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ / ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೋಮ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ, ಹಾಗೂ ಇತರೆ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯ ಅಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

(ಈ) ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ, ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

4. 2014–15ನೇ ಸಾಲಿನಿಂದ, ಈ ಸೌಲಭ್ಯವನ್ನು ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು, ಕಡ್ಡಾಯವಾಗಿ ಅವರ ಹೆಸರಿನಲ್ಲಿ **ಆಧಾರ್ ಸಂಖ್ಯೆಯನ್ನು** ಹೊಂದಿರತಕ್ಕದ್ದು.

## III. ಅರ್ಜಿ ಸಲ್ಲಿಸುವ ವಿಧಾನ:

(ಅ) ಈ ಯೋಜನೆಯಡಿ ಸಹಾಯಧನ ಪಡೆಯಲು ಇಚ್ಛಿಸುವ ಹಾಗೂ ಅರ್ಹತೆಯುಳ್ಳ ವಿದ್ಯಾರ್ಥಿಗಳು, ನಿಗದಿತ **ಅರ್ಜಿ ನಮೂನೆಯಲ್ಲಿ, ಆನ್‌ಲೈನ್** ಮೂಲಕ ಎಲ್ಲಾ ವಿವರಗಳನ್ನು ನಮೂದಿಸಿ, ಅರ್ಜಿ ಸಲ್ಲಿಸಬೇಕು.

..3

(ಆ) ಅರ್ಜಿಯೊಂದಿಗೆ ಲಗತ್ತಿಸಬೇಕಾದ ಎಲ್ಲಾ ಮೂಲ ದಾಖಲೆಗಳನ್ನು ಸ್ಕ್ಯಾನ್(Scan) ಮಾಡಿ, ಅಪ್‌ಲೋಡ್(Upload)ಮಾಡಬೇಕು.

(ಇ) ಯಾವುದಾದರೂ ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಬ್ಯಾಂಕಿನಲ್ಲಿ, ವಿದ್ಯಾರ್ಥಿಯ ಹೆಸರಿನಲ್ಲಿ (ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿ ದಾಖಲಾಗಿರುವ ರೀತಿಯಲ್ಲಿ), ಉಳಿತಾಯ ಖಾತೆಯನ್ನು ತೆರೆದು, ವಿವರಗಳನ್ನು ಅರ್ಜಿಯಲ್ಲಿ ನಮೂದಿಸಬೇಕು.

## IV. ಅನುದಾನ ಹಂಚಿಕೆ ವಿಧಾನ:

(ಅ) ಆಯಾ ಶೈಕ್ಷಣಿಕ ವರ್ಷದಲ್ಲಿ ಲಭ್ಯವಾಗುವ ಅನುದಾನವನ್ನು ಪ್ರವರ್ಗವಾರು ಈ ಕೆಳಗಿನ ಮೀಸಲಾತಿಯಂತೆ ಮರು ಹಂಚಿಕೆ ಮಾಡಬೇಕು.

**ಪ್ರವರ್ಗವಾರು ಹಂಚಿಕೆ ಮಾಡಬೇಕಾಗಿರುವ ಮೊತ್ತದ ಶೇಕಡಾವಾರು**

| | | |
|---|---|---|
| ಪ್ರವರ್ಗ–1 | – | 15 % |
| ಪ್ರವರ್ಗ–2ಎ | – | 53 % |
| ಪ್ರವರ್ಗ–3ಎ | – | 14 % |
| ಪ್ರವರ್ಗ–3ಬಿ | – | 18 % |
| ಒಟ್ಟು | – | **100 %** |

(ಆ) ಆ ಆರ್ಥಿಕ ವರ್ಷಕ್ಕೆ ಲಭ್ಯವಾಗುವ ಅನುದಾನದ ಮಿತಿಗೆ ಒಳಪಟ್ಟು, ಅರ್ಹತೆ ಮತ್ತು ಆದಾಯಕ್ಕೆ (Merit cum Means) ಅನುಗುಣವಾಗಿ ಮಂಜೂರು ಮಾಡಬೇಕು.

## V. ಕಾಲೇಜು ಪ್ರಾಂಶುಪಾಲರು ಮತ್ತು ಇಲಾಖೆಯ "ಪರಿಶೀಲನಾ ಅಧಿಕಾರಿ" ಕೈಗೊಳ್ಳಬೇಕಾದ ಕ್ರಮಗಳು:

(ಅ) ಆ ಕಾಲೇಜಿನ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳ ಸ್ವೀಕೃತಿ ಪತ್ರ ಮತ್ತು ಅಪ್‌ಲೋಡ್ ಮಾಡಿರುವ ಎಲ್ಲಾ ದಾಖಲೆಗಳ, ಧೃಢೀಕೃತ ಪ್ರತಿಗಳನ್ನು ವಿದ್ಯಾರ್ಥಿಗಳಿಂದ ಪಡೆದುಕೊಳ್ಳಬೇಕು. ಸದರಿ ಮಾಹಿತಿಯನ್ನು ಅವರು ಸಲ್ಲಿಸಿರುವ ದಾಖಲೆಗಳನ್ನು, ಕಾಲೇಜಿನಲ್ಲಿ ಲಭ್ಯವಿರುವ ಮಾಹಿತಿಗಳೊಂದಿಗೆ ಪರಿಶೀಲಿಸಿ ಆನ್‌ಲೈನ್‌ನಲ್ಲಿ ಧೃಡೀಕರಿಸಬೇಕು. ಈ ರೀತಿ ಧೃಢೀಕರಿಸಲ್ಪಟ್ಟ ಪಟ್ಟಿಯ ಹಾರ್ಡ್‌ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು, ಪ್ರತಿ ವಿದ್ಯಾರ್ಥಿವಾರು ಅಗತ್ಯ ದಾಖಲಾತಿಗಳನ್ನು, ಅನುಕ್ರಮವಾಗಿ ಜೋಡಿಸಿ ಸಿದ್ದಪಡಿಸಿಟ್ಟುಕೊಳ್ಳಬೇಕು.

(ಆ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ, ಅಧಿಕೃತ **"ಪರಿಶೀಲನಾ ಅಧಿಕಾರಿ"** ಕಾಲೇಜಿನ ಪ್ರಾಂಶುಪಾಲರು ಈ ಮೇಲಿನಂತೆ ಸಿದ್ದಪಡಿಸಿದ ಧೃಢೀಕೃತ ಪಟ್ಟಿಯಲ್ಲಿ ನಮೂದಾಗಿರುವ ಎಲ್ಲ ವಿದ್ಯಾರ್ಥಿಗಳ ದಾಖಲಾತಿಗಳು ಸರಿ ಇರುವ ಬಗ್ಗೆ ಹಾಗೂ ಈ ಸೌಲಭ್ಯಕ್ಕೆ ಅವರು ಅರ್ಹರಿರುವ ಬಗ್ಗೆ ಆನ್‌ಲೈನ್‌ನಲ್ಲಿ ಧೃಢೀಕರಿಸಬೇಕು. ಸದರಿ ದಾಖಲಾತಿಗಳನ್ನು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಬೇಕು.

(ಇ) ಈ ರೀತಿ ಸಲ್ಲಿಸಿದ ಮಾಹಿತಿ ಆಧಾರದ ಮೇಲೆ ತಾಲ್ಲೂಕು ಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ, ಪರಿಶೀಲನೆ ಮಾಡಿ ಅರ್ಹ ವಿದ್ಯಾರ್ಥಿಗಳಿಗೆ "ಊಟ ಮತ್ತು ವಸತಿ ಸಹಾಯ" ವನ್ನು ಮಂಜೂರು ಮಾಡಬೇಕು.

..4

(ಈ) ಈ ಮೇಲಿನಂತೆ ಮಂಜೂರು ಮಾಡಿದ, ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ, ಪ್ರಾಂಶುಪಾಲರು ಪ್ರತಿ ತಿಂಗಳ ಹಾಜರಾತಿಯನ್ನು, ಅವರ ಹೆಸರು ಮತ್ತು ತರಗತಿಯ ವಿವರಗಳನ್ನು ನಮೂದಿಸಿ ದೃಢೀಕರಿಸಿ, ನಂತರದ ತಿಂಗಳ ಮೊದಲನೇ ವಾರದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವೆಬ್‌ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಬೇಕು.

(ಉ) ವಿದ್ಯಾರ್ಥಿಗೆ ನೀಡುವ ಸೌಲಭ್ಯಗಳು, ಅವರ ಶೈಕ್ಷಣಿಕ ಪ್ರಗತಿ ಮತ್ತು ಉತ್ತಮ ನಡತೆಗೆ ಒಳಪಟ್ಟಿರುತ್ತದೆ. ಆದ ಕಾರಣ, ಶೈಕ್ಷಣಿಕ ಪ್ರಗತಿಯು ತೃಪ್ತಿಕರವಾಗಿಲ್ಲದಿದ್ದಲ್ಲಿ, ಅಧಿಕೃತವಾಗಿ ಅನುಮತಿಯನ್ನು ಪಡೆಯದೇ ಪದೇ ಪದೇ ತರಗತಿಗಳಿಗೆ ಗೈರು ಹಾಜರಾದಲ್ಲಿ, ಅಥವಾ ಮುಷ್ಕರಗಳಲ್ಲಿ ಭಾಗವಹಿಸಿದ್ದಲ್ಲಿ ಅಥವಾ ಇನ್ನಾವುದೇ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ್ದಲ್ಲಿ, ಈ ಸೌಲಭ್ಯಗಳನ್ನು ತಕ್ಷಣದಿಂದಲೇ ಹಿಂದಕ್ಕೆ ಪಡೆಯಲಾಗುವುದು. ಆದ ಕಾರಣ ಈ ರೀತಿ ವರ್ತಿಸುವ ವಿದ್ಯಾರ್ಥಿಗಳ ಬಗ್ಗೆ ವೆಬ್‌ಪೋರ್ಟಲ್‌ನಲ್ಲಿ ಷರಾ ನಮೂದಿಸಬೇಕು.

**VI. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು ಅನುದಾನವನ್ನು ಮರು ಹಂಚಿಕೆ ಮಾಡಲು ಅನುಸರಿಸಬೇಕಾದ ಕಾರ್ಯವಿಧಾನ:**

(ಅ) ಆಯಾ ಜಿಲ್ಲೆಗೆ ಆಯಾ ಆರ್ಥಿಕ ವರ್ಷದಲ್ಲಿ ಲಭ್ಯವಿರುವ ಅನುದಾನವನ್ನು ಹಿಂದುಳಿದ ವರ್ಗಗಳ ಪ್ರವರ್ಗಗಳ ವಿದ್ಯಾರ್ಥಿಗಳಿಗೆ ಅರ್ಹತೆ ಮತ್ತು ಆದಾಯಕ್ಕೆ (Merit cum Means) ಅನುಗುಣವಾಗಿ, ವಿದ್ಯಾರ್ಥಿಗಳ ಮೆರಿಟ್ ಪಟ್ಟಿಯನ್ನು ತಯಾರಿಸಬೇಕು ಮತ್ತು ಈ ಮೆರಿಟ್ ಪಟ್ಟಿಯಂತೆ, ತಾಲ್ಲೂಕುವಾರು, ಅನುದಾನವನ್ನು ಹಂಚಿಕೆ ಮಾಡಬೇಕು.

(ಆ) ಜಿಲ್ಲಾ ಪಂಚಾಯತಿಯಿಂದ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ನೇರವಾಗಿ ಅನುದಾನವನ್ನು ಮೇಲಿನಂತೆ ಮರು ಹಂಚಿಕೆ ಮಾಡಿ ಬಿಡುಗಡೆ ಮಾಡಬೇಕು.

(ಇ) ಸದರಿ ಮೆರಿಟ್ ಪಟ್ಟಿಯ ಹಾರ್ಡ್ ಪ್ರತಿಯನ್ನು ಸಂಬಂಧಪಟ್ಟ ತಾಲ್ಲೂಕು ಅಧಿಕಾರಿಗಳಿಗೆ ಒದಗಿಸುವುದು.

(ಈ) ವಿವಿಧ ಕೋರ್ಸುಗಳು, ಶೈಕ್ಷಣಿಕ ವರ್ಷದ ವಿವಿಧ ತಿಂಗಳುಗಳಲ್ಲಿ ಪ್ರಾರಂಭವಾಗುವ ಕಾರಣ, ವಿಳಂಬವಾಗಿ ಪ್ರಾರಂಭವಾಗುವ ಕೋರ್ಸುಗಳಿಗೆ ಅರ್ಜಿ ಸಲ್ಲಿಸಲು ಪ್ರತ್ಯೇಕ ಕೊನೆಯ ದಿನಾಂಕವನ್ನು ನಿಗದಿಪಡಿಸತಕ್ಕದ್ದು. ಇಂತಹ ಕೋರ್ಸುಗಳಿಗೆ ಪ್ರತ್ಯೇಕವಾಗಿ ಪ್ರವರ್ಗವಾರು ಮೆರಿಟ್ ಪಟ್ಟಿಯನ್ನು ತಯಾರಿಸಬೇಕು ಹಾಗೂ ಇದಕ್ಕಾಗಿ ಅಗತ್ಯವಿರುವಷ್ಟು ಅನುದಾನವನ್ನು ಕಾಯ್ದಿರಿಸಿಕೊಳ್ಳಬೇಕು.

**VII. ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ವಿದ್ಯಾರ್ಥಿ ವೇತನ ಮಂಜೂರು ಮಾಡುವ ಕಾರ್ಯವಿಧಾನ:**

1. (ಅ) ಒಂದು ತಿಂಗಳ ಸಹಾಯಧನವನ್ನು ಆ ವಿದ್ಯಾರ್ಥಿಯ ಖಾತೆಗೆ ಜಮಾ ಮಾಡಬೇಕಾಗಿದ್ದಲ್ಲಿ, ಆ ವಿದ್ಯಾರ್ಥಿಯ ಹಿಂದಿನ ತಿಂಗಳ, ಕಾಲೇಜಿನ ಹಾಜರಾತಿ ಕನಿಷ್ಠ ಶೇ.75 ರಷ್ಟು ಇರಬೇಕು. ಆದರೆ, ಈ ನಿರ್ಬಂಧ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಬರುವ ಸಾರ್ವತ್ರಿಕ ರಜಾ ದಿನಗಳಿಗೆ ಅನ್ವಯವಾಗುವುದಿಲ್ಲ.

   (ಆ) ನವೀಕರಣ ಹಾಗೂ ಹೊಸ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ, ಶೈಕ್ಷಣಿಕ ವರ್ಷದಲ್ಲಿ ತರಗತಿಗಳು ಪ್ರಾರಂಭವಾದ ತಿಂಗಳಿಂದ ನಂತರದ 10 ತಿಂಗಳ ಅವಧಿಗೆ ಅಥವಾ ಕೋರ್ಸು ಮುಕ್ತಾಯವಾಗುವ ತಿಂಗಳವರೆಗೆ, ಇವುಗಳಲ್ಲಿ ಯಾವುದು ಕಡಿಮೆಯೋ ಆ

..5

[signature]

ಅವಧಿಗೆ, ಈ ಸೌಲಭ್ಯವನ್ನು ಮಂಜೂರು ಮಾಡಬೇಕು. ಆದರೆ, ವಿದ್ಯಾರ್ಥಿಯು, **ಕೋರ್ಸಿನ ಪ್ರಾರಂಭದ ಹಾಗೂ ಅಂತಿಮ ತಿಂಗಳುಗಳಲ್ಲಿ, ಕನಿಷ್ಠ 15 ದಿನಗಳ ಹಾಜರಾತಿ ಹೊಂದಿರಬೇಕು.**

2. (ಅ) ಪ್ರಾಂಶುಪಾಲರು ವೆಬ್‌ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಿರುವ ವಿದ್ಯಾರ್ಥಿಗಳ ತಿಂಗಳ ಹಾಜರಾತಿಯನ್ವಯ, ಶೇಕಡ 75 ರಷ್ಟು ಹಾಜರಾತಿ ಇರುವ ತಿಂಗಳುಗಳಿಗೆ, ರೂ.1500/- ರಂತೆ, ಊಟ ಮತ್ತು ವಸತಿ ಸಹಾಯದ ಮೊತ್ತವನ್ನು ಮಂಜೂರು ಮಾಡಬೇಕು.
   (ಆ) **ಪ್ರತಿ ಮಾಹೆವಾರು**, ಮಂಜೂರಾತಿ ಆದೇಶ ಮತ್ತು ಬ್ಯಾಂಕುವಾರು ಬಿಲ್ಲುಗಳನ್ನು ಇಲಾಖೆಯ ವೆಬ್‌ಪೋರ್ಟಲ್‌ನಿಂದ ಡೌನ್‌ಲೋಡ್ ಮಾಡಿಕೊಂಡು, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಮೇಲು ರುಜು ಪಡೆದುಕೊಳ್ಳಬೇಕು.
   (ಇ) ಸದರಿ ಬಿಲ್ಲನ್ನು, ಬ್ಯಾಂಕುವಾರು ವಿದ್ಯಾರ್ಥಿಗಳ ಬ್ಯಾಂಕ್ ಅಕೌಂಟ್ ಮತ್ತು ಐ.ಎಫ್.ಎಸ್.ಸಿ ಕೋಡ್ ನೊಂದಿಗೆ ಖಜಾನೆಗೆ (ಸಾಫ್ಟ್ ಪ್ರತಿಯೊಂದಿಗೆ) ಸಲ್ಲಿಸಿ, ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ **ಆನ್‌ಲೈನ್ ಮೂಲಕ** ಜಮಾ ಮಾಡಲು ಕ್ರಮ ತೆಗೆದುಕೊಳ್ಳಬೇಕು.
3. ಕೋರ್ಸಿನ ಅವಧಿ ಎರಡು ಆರ್ಥಿಕ ವರ್ಷಗಳಿಗೆ ವಿಸ್ತರಣೆಯಾದಲ್ಲಿ, ಆಯಾ ಆರ್ಥಿಕ ವರ್ಷಕ್ಕೆ ಹಂಚಿಕೆಯಾದ ಅನುದಾನದಿಂದ, ಮೇಲಿನ ನಿಬಂಧನೆಗಳಿಗೆ ಒಳಪಟ್ಟು, ಈ ಸೌಲಭ್ಯವನ್ನು ಮಂಜೂರು ಮಾಡಬೇಕು.
4. ಸೆಮಿಸ್ಟರ್ ಪದ್ಧತಿ ಇರುವ ಕೋರ್ಸುಗಳಿಗೆ ಸಂಬಂಧಪಟ್ಟಂತೆ, ಆ ಶೈಕ್ಷಣಿಕ ವರ್ಷದಲ್ಲಿ ಬರುವ ಸೆಮಿಸ್ಟರುಗಳು ಎಂದರ್ಥ.

## VIII. ತಪ್ಪು ಮಾಹಿತಿಗೆ ದಂಡ:

1. ಅರ್ಜಿದಾರರು ಅಥವಾ ಶಿಕ್ಷಣ ಸಂಸ್ಥೆಯು, ತಪ್ಪು ಮಾಹಿತಿ ನೀಡಿದ್ದಲ್ಲಿ, ಅಂತಹವರ ವಿರುದ್ಧ ನಿಯಮಾನುಸಾರ ಈ ಕೆಳಗಿನಂತೆ ಕ್ರಮ ತೆಗೆದುಕೊಳ್ಳಲಾಗುವುದು.
2. ಭಾರತೀಯ ದಂಡ ಸಂಹಿತೆಯ ಕಲಂ 177 ಮತ್ತು 181ರ ಪ್ರಕಾರ, ಶಿಕ್ಷೆಗೆ ಗುರಿಪಡಿಸಲಾಗುತ್ತದೆ.
3. ಕಾನೂನಿನಂತೆ ಕ್ರಮ ಜರುಗಿಸುವುದರ ಜೊತೆಗೆ, ವಿದ್ಯಾರ್ಥಿಯು ಪಡೆದ ಒಟ್ಟು ಆರ್ಥಿಕ ಸಹಾಯವನ್ನು ಆ ವಿದ್ಯಾರ್ಥಿಯಿಂದ ಅಥವಾ ಅವರ ತಂದೆ-ತಾಯಿ / ಪೋಷಕರಿಂದ, ಭೂ ಕಂದಾಯ ಬಾಕಿಯೆಂದು ವಸೂಲಿ ಮಾಡಲಾಗುವುದು.
4. ಮಂಜೂರು ಮಾಡುವ ಅಧಿಕಾರಿಗಳು ಸಹ, ನಿಯಮಗಳ ವಿರುದ್ಧ ಮಂಜೂರು ಮಾಡಿ, ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದಲ್ಲಿ, ಅಂತಹವರ ವಿರುದ್ಧ ಶಿಸ್ತಿನ ಕ್ರಮ ಜರುಗಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಹಾಗೂ ಈ ರೀತಿ ತಪ್ಪಾಗಿ ಪಾವತಿಯಾದ ಮೊತ್ತವನ್ನು ಅವರ ವೇತನದಿಂದ ವಸೂಲಿ ಮಾಡಲಾಗುವುದು.

## IX. ಇತರೆ:

1. ಪ್ರವರ್ಗವಾರು ಜಾತಿಗಳ ಪಟ್ಟಿ, ಕುಟುಂಬದ ವಾರ್ಷಿಕ ವರಮಾನ, ಅರ್ಹತೆ, ಇತ್ಯಾದಿ, ಸರ್ಕಾರವು ಕಾಲ ಕಾಲಕ್ಕೆ ಹೊರಡಿಸುವ ಆದೇಶಗಳನ್ವಯ ಪರಿಷ್ಕರಣೆಗೆ ಒಳಪಟ್ಟಿರುತ್ತದೆ.
2. ಈ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಅರ್ಜಿ ನಮೂನೆ, ಕಾರ್ಯವಿಧಾನ ಇತ್ಯಾದಿಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ನಿರ್ಧರಿಸುವುದು.

ಬಿ.ಹೆಚ್. ಅನಿಲ್ ಕುಮಾರ್
(ಬಿ.ಹೆಚ್.ಅನಿಲ್ ಕುಮಾರ್) ೨೪/೯/೨೦೧೦
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಹಿಂವಕ 518 ಬಿಎಂಎಸ್ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ
ಬೆಂಗಳೂರು, ದಿನಾಂಕ:26.09.2024

**ತಿದ್ದುಪಡಿ**

ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಅನುಷ್ಠಾನಗೊಳಿಸುತ್ತಿರುವ ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಕಾರ್ಯಕ್ರಮದ ಮಂಜೂರಾತಿ ಹಾಗೂ ಅನುಷ್ಠಾನದ ಬಗ್ಗೆ ಹೊರಡಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 662 ಬಿಎಂಎಸ್ 2016, ದಿನಾಂಕ:04.10.2016ರ ಮಾರ್ಗಸೂಚಿಗಳಲ್ಲಿ ಈ ಕೆಳಕಂಡಂತೆ ತಿದ್ದುಪಡಿ ಮಾಡಿದ್ದು, ಅದರಂತೆ ತಿದ್ದಿಓದಿಕೊಳ್ಳತಕ್ಕದ್ದು.

| ಕ್ರ ಸಂ | ಪ್ರಸ್ತುತ ಇರುವ ಮಾರ್ಗಸೂಚಿ | ಮಾರ್ಗಸೂಚಿಯಲ್ಲಿ ಬದಲಾವಣೆ / ತಿದ್ದುಪಡಿ ಮಾಡಲಾದ ಅಂಶ |
|---|---|---|
| 1 | **ಮಾರ್ಗಸೂಚಿಯ ಕ್ರಮ ಸಂಖ್ಯೆ:1**ರಲ್ಲಿನ ಆ) ರಲ್ಲಿ ಈ ಯೋಜನೆಯಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳಿಗೆ ರೂ.1,500/- ರಂತೆ ಶೈಕ್ಷಣಿಕ ವರ್ಷದ 10 ತಿಂಗಳಿಗೆ ಒಟ್ಟು ರೂ.15,000/- ಗಳ ಸಹಾಯ ಧನವನ್ನು ಇತರ ನಿಬಂಧನೆಗೊಳಪಟ್ಟು ಅವರ ಯಾವುದಾದರೂ ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಬ್ಯಾಂಕಿನಲ್ಲಿ ತೆರೆದಿರುವ ಬ್ಯಾಂಕ್ ಖಾತೆಗೆ ಆನ್‌ಲೈನ್ (ಆರ್.ಟಿ.ಜಿ.ಎಸ್.) ಮೂಲಕ ಜಮಾ ಮಾಡಲಾಗುವುದು. | ಯೋಜನೆಯಡಿ ಆಯ್ಕೆಯಾದ ಈ ಯೋಜನೆಯಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳಿಗೆ ರೂ.1,500/- ರಂತೆ ಶೈಕ್ಷಣಿಕ ವರ್ಷದ 10 ತಿಂಗಳಿಗೆ ಒಟ್ಟು ರೂ.15,000/- ಗಳ ಸಹಾಯ ಧನವನ್ನು ಇತರ ನಿಬಂಧನೆಗೊಳಪಟ್ಟು ವಿದ್ಯಾರ್ಥಿಯ ಆಧಾರ್ ಸೀಡಿಂಗ್ ಆಗಿರುವ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮುಖಾಂತರ ಒಂದೇ ಬಾರಿಗೆ ನೇರವಾಗಿ ಜಮೆ ಮಾಡಲಾಗುವುದು. |
| 2 | **ಮಾರ್ಗಸೂಚಿಯ ಕ್ರಮ ಸಂಖ್ಯೆ:1** ರಲ್ಲಿನ ಇ) ರಲ್ಲಿ ವಿದ್ಯಾರ್ಥಿಗಳು ಕೆಳಕಂಡ ಯಾವುದಾದರೂ ಒಂದು ಸೌಲಭ್ಯವನ್ನು ಮಾತ್ರ ಪಡೆಯಬಹುದು.<br>1. ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ<br>2. ಊಟ ಮತ್ತು ವಸತಿ ಸಹಾಯ ಯೋಜನೆ<br>3. ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ | ವಿದ್ಯಾರ್ಥಿಗಳು ಕೆಳಕಂಡ ಯಾವುದಾದರೂ ಒಂದು ಸೌಲಭ್ಯವನ್ನು ಮಾತ್ರ ಪಡೆಯಬಹುದು.<br>1. ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ<br>2. ಊಟ ಮತ್ತು ವಸತಿ ಸಹಾಯ ಯೋಜನೆ. |

| | | |
|---|---|---|
| 3. | **ಮಾರ್ಗಸೂಚಿಯ ಕ್ರಮ ಸಂಖ್ಯೆ:2**ರಲ್ಲಿನ 2.(ಇ)(ಈ) ಈ ಯೋಜನೆಯಡಿ ಪ್ರಥಮ ಬಾರಿಗೆ ಸೌಲಭ್ಯವನ್ನು ಪಡೆಯಲು ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.<br>ಪ್ರವರ್ಗ-1 40%<br>ಪ್ರವರ್ಗ-2ಎ, 3ಎ, 3ಬಿ 50%<br>ನವೀಕರಣ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಬೇಕಾಗಿದ್ದಲ್ಲಿ ಪಡೆಯಲು ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.<br>ಪ್ರವರ್ಗ-1 50%<br>ಪ್ರವರ್ಗ-2ಎ, 3ಎ, 3ಬಿ 60% | ಈ ಯೋಜನೆಯಡಿ ಸೌಲಭ್ಯವನ್ನು ಪಡೆಯಲು , ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.<br>ಪ್ರವರ್ಗ-1 ಮತ್ತು ವಿಶೇಷ ಚೇತನ ವಿದ್ಯಾರ್ಥಿಗಳಿಗೆ – 55%<br>ಇತರೆ ಹಿಂದುಳಿದ ವರ್ಗಗಳ ಪ್ರವರ್ಗಗಳಿಗೆ - 65% |
| 4. | **ಮಾರ್ಗಸೂಚಿಯ ಕ್ರಮ ಸಂಖ್ಯೆ:6**ರಲ್ಲಿನ ಆ)ರಲ್ಲಿ ಒಂದು ತಿಂಗಳ ಸಹಾಯಧನವನ್ನು ಆ ವಿದ್ಯಾರ್ಥಿ ಖಾತೆಗೆ ಜಮಾ ಮಾಡಬೇಕಾಗಿದ್ದಲ್ಲಿ ಆ ವಿದ್ಯಾರ್ಥಿಯು ಹಿಂದಿನ ತಿಂಗಳ, ಕಾಲೇಜಿನ ಹಾಜರಾತಿ ಕನಿಷ್ಠ ಶೇಕಡ 75%ರಷ್ಟು ಇರಬೇಕು. ಆದರೆ ಈ ನಿರ್ಬಂಧ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಬರುವ ಸಾರ್ವತ್ರಿಕ ರಜಾ ದಿನಗಳಿಗೆ ಅನ್ವಯಿಸುವುದಿಲ್ಲ.<br>ಇ) ರಲ್ಲಿ ನವೀಕರಣ ಹಾಗೂ ಹೊಸ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಶೈಕ್ಷಣಿಕ ವರ್ಷದಲ್ಲಿ ತರಗತಿಗಳು ಪ್ರಾರಂಭವಾದ ತಿಂಗಳಿನಿಂದ ನಂತರದ 10 ತಿಂಗಳ ಅವಧಿಗೆ ಅಥವಾ ಕೋರ್ಸು ಮುಕ್ತಾಯವಾಗುವ ತಿಂಗಳವರೆಗೆ ಇವುಗಳಲ್ಲಿ ಯಾವುದೂ ಕಡಿಮೆಯೋ ಆ ಅವಧಿಗೆ ಈ ಸೌಲಭ್ಯವನ್ನು ಮಂಜೂರು ಮಾಡಬೇಕು. ಆದರೆ ವಿದ್ಯಾರ್ಥಿಯು ಕೋರ್ಸಿನ ಪ್ರಾರಂಭದ ಹಾಗೂ ಅಂತಿಮ ತಿಂಗಳುಗಳಲ್ಲಿ ಕನಿಷ್ಠ 15 ದಿನಗಳ ಹಾಜರಾತಿ ಹೊಂದಿರಬೇಕು. | ಕ್ರಮ ಸಂಖ್ಯೆ:6ರಲ್ಲಿನ ಆ), ಇ), ಈ), ಋ) ಮತ್ತು ಎ) ಗಳನ್ನು ಕೈಬಿಟ್ಟು ಈ ಕಾರ್ಯಕ್ರಮದಡಿ ಸಹಾಯಧನ ಮಂಜೂರು ಮಾಡಲು ಹಾಜರಾತಿ ಪಡೆಯುವುದರಿಂದ ಸಂಪೂರ್ಣ ವಿನಾಯಿತಿ ನೀಡಿದೆ. |

| | | |
|---|---|---|
| | ಈ) ರಲ್ಲಿ ಪ್ರಾಶುಂಪಾಲರು ವೆಬ್‌ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಿರುವ ವಿದ್ಯಾರ್ಥಿಗಳ ತಿಂಗಳ ಹಾಜರಾತಿಯು ಅನ್ವಯ ಶೇ 75 ರಷ್ಟು ಹಾಜರಾತಿ ಇರುವ ತಿಂಗಳುಗಳಿಗೆ ರೂ.1500/- ರಂತೆ ಊಟ ಮತ್ತು ವಸತಿ ಸಹಾಯ ಮೊತ್ತವನ್ನು ಮಂಜೂರು ಮಾಡಬೇಕು.<br>ಋ) ಕೋರ್ಸಿನ ಅವಧಿ ಎರದು ಆರ್ಥಿಕ ವರ್ಷಗಳಿಗೆ ವಿಸ್ತರಣೆಯಾದಲ್ಲಿ ಆಯಾ ಆರ್ಥಿಕ ವರ್ಷಕ್ಕೆ ಹಂಚಿಕೆಯಾದ ಆನುದಾನದಿಂದ ಮೇಲಿನ ನಿಬಂಧನೆಗಳಿಗೆ ಒಳಪಟ್ಟು ಈ ಸೌಲಭ್ಯವನ್ನು ಮಂಜೂರು ಮಾಡಬೇಕು.<br>ಎ) ಸೆಮಿಸ್ಟರ್ ಪದ್ಧತಿ ಇರುವ ಕೋರ್ಸುಗಳಿಗೆ ಸಂಬಂಧಪಟ್ಟಂತೆ ಆ ಶೈಕ್ಷಣಿಕ ವರ್ಷದಲ್ಲಿ ಬರುವ ಸೆಮಿಸ್ಟರ್‌ಗಳು ಎಂದರ್ಥ. | |
| 5. | **ಮಾರ್ಗಸೂಚಿಯ 7 ರಲ್ಲಿನ 1**. ರಲ್ಲಿ ಅರ್ಜಿ ಸಲ್ಲಿಸಿರುವ ಎಲ್ಲಾ ನವೀಕರಣ ವಿದ್ಯಾರ್ಥಿಗಳನ್ನು ಧನ ಸಹಾಯಕ್ಕಾಗಿ ಪರಿಗಣಿಸುವುದು. | ಕೈಬಿಡಲಾಗಿದೆ. |

ಈ ತಿದ್ದುಪಡಿಯನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 574 ವೆಚ್ಚ-3/2023, ದಿನಾಂಕ:10.09.2024 ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ ಹಾಗೂ ಉಳಿದಂತೆ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 662 ಬಿಎಂಎಸ್ 2016, ದಿನಾಂಕ:04.10.2016ರ ಮಾರ್ಗಸೂಚಿಗಳಲ್ಲಿ ಈ ಹಿಂದೆ ನಮೂದಿಸಿರುವ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಅನ್ವಯಿಸುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ.ಅಶ್ವತ್ಥ್)** 25/9/24
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ)
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.

4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು (ಆಯುಕ್ತರ ಮುಖಾಂತರ).

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ.
2. ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.